# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 980 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ. ಕೆ. ಟಿ. ಶ್ರೀಕಂಠೇಗೌಡ |
| ಉತ್ತರಿಸಬೇಕಾದ ದಿನಾಂಕ | : | 21.12.2021 |
| ಉತ್ತರಿಸುವವರು | : | ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರಸಬಲೀಕರಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ APEX ಗಳು ಯಾವುವು; (ವಿಳಾಸದೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು) | ಮಾಹಿತಿಯನ್ನು ಅನುಬಂಧ-1 ರಲ್ಲಿ ಒದಗಿಸಿದೆ. |
| ಆ) | ಸದರಿ ಇಲಾಖೆಯಡಿಯಲ್ಲಿ ಜಾರಿಯಲ್ಲಿರುವ ಯೋಜನೆಗಳು ಯಾವುವು; (ಯೋಜನಾವಾರು ವಿವರವಾದ ಮಾಹಿತಿ ನೀಡುವುದು) | ಮಾಹಿತಿಯನ್ನು ಅನುಬಂಧ-2 ರಲ್ಲಿ ಒದಗಿಸಿದೆ. |
| ಇ) | ಈ ಇಲಾಖಾ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಸ್ತರದ ಸಿಬ್ಬಂದಿಗಳು ಯಾರು ಯಾರು; (ಕ್ರಮವಾಗಿ ಗ್ರಾಮ ಪಂಚಾಯಿತಿಯಿಂದ ಸರ್ಕಾರದ ಸಚಿವಾಲಯದ ವರೆಗೂ ಇರುವ ವಿವಿಧ ಸ್ತರದ ಹುದ್ದೆ ಮತ್ತು ಅವುಗಳಿಗೆ ನಿಗದಿಪಡಿಸಿರುವ ವೇತನದೊಂದಿಗೆ ಮಾಹಿತಿ ನೀಡುವುದು) | ಮಾಹಿತಿಯನ್ನು ಅನುಬಂಧ-3 ರಲ್ಲಿ ಒದಗಿಸಿದೆ. |
| ಈ) | ಐಸಿಡಿಎಸ್ ಯೋಜನೆಯಡಿ ಮಕ್ಕಳಿಗೆ ಪೌಷ್ಠಿಕ ಆಹಾರವನ್ನು ಯಾವ ರೀತಿ ವಿತರಿಸಲಾಗುತ್ತಿದೆ; ಟೆಂಡರ್ ಕರೆಯಲಾಗಿದೆಯೇ; ಅಥವಾ ಜನತಾ ಬಜಾರ್ ಮುಖಾಂತರ ನೀಡಲಾಗುತ್ತಿದೆಯೇ? (ವಿವರವಾದ ಮಾಹಿತಿ ನೀಡುವುದು) | ಮಾನ್ಯ ಸರ್ವೋಚ್ಚ ನ್ಯಾಯಲಯದ ಆದೇಶದಂತೆ ಅಂಗನವಾಡಿ ಕೇಂದ್ರಗಳಿಗೆ ಆಹಾರ ಪದಾರ್ಥಗಳನ್ನು ಸರಬರಾಜು ಮಾಡಲು ಇಲಾಖಾ ವತಿಯಿಂದ 137 ಮಹಿಳಾ ಪೂರಕ ಪೌಷ್ಠಿಕ ಆಹಾರ ಉತ್ಪಾದನಾ ಕೇಂದ್ರ (MSPTC) ಗಳನ್ನು ಸ್ಥಾಪಿಸಲಾಗಿದೆ. ಸದರಿ (MSPTC) ಗಳು ಅಂಗನವಾಡಿ ಕೇಂದ್ರದ ಮಕ್ಕಳಿಗೆ ಪೂರಕ ಪೌಷ್ಠಿಕ ಆಹಾರವನ್ನು ಸರಬರಾಜು ಮಾಡುತ್ತಿವೆ. ಮಕ್ಕಳಿಗೆ ಅಗತ್ಯವಿರುವ ಪೂರಕ ಪೌಷ್ಠಿಕ ಆಹಾರವನ್ನು ಯಾವುದೇ ಟೆಂಡರ್ ಅಥವಾ ಜನತಾ ಬಜಾರ್ ಮೂಲಕ ನೀಡಲಾಗುತ್ತಿಲ್ಲ. |

ಸಂಖ್ಯೆ: ಮಮಇ 193 ಸ್ವೀಮರ 2021

Halappa BA

(ಆಚಾರ್ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ ಸಚಿವರು

# ಅನುಬಂಧ–1

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ APEX ಗಳ ಪಟ್ಟಿ

| ಕ್ರ.ಸಂ | ಕಛೇರಿ ಹೆಸರು | ವಿಳಾಸ |
|---|---|---|
| 1 | ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿ ಕಟ್ಟಡ, ಅಂಬೇಡ್ಕರ್ ವೀಧಿ, ಬೆಂಗಳೂರು |
| 2 | ನಿರ್ದೇಶನಾಲಯ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ | ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಪೋಡಿಯಂ ಬ್ಲಾಕ್, ವಿ.ವಿ ಟವರ್, ಬೆಂಗಳೂರು |
| 3 | ಮಕ್ಕಳ ರಕ್ಷಣಾ ನಿರ್ದೇಶನಾಲಯ | ಮಕ್ಕಳ ರಕ್ಷಣಾ ನಿರ್ದೇಶನಾಲಯ, ಪೋಡಿಯಂ ಬ್ಲಾಕ್, ವಿ.ವಿ ಟವರ್, ಬೆಂಗಳೂರು |
| 4 | ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ | ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಜಯನಗರ ಶಾಪಿಂಗ್ ಕಾಂಪ್ಲೆಕ್ಸ್, ಜಯನಗರ, ಬೆಂಗಳೂರು |
| 5 | ಕರ್ನಾಟಕ ರಾಜ್ಯ ಮಹಿಳಾ ಆಯೋಗ | ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಕಾವೇರಿ ಭವನ, ಕೆಂಪೇಗೌಡ ರಸ್ತೆ, ಬೆಂಗಳೂರು |
| 6 | ಜವಾಹರ ಬಾಲಭವನ ಸೊಸೈಟಿ | ಜವಾಹರ ಬಾಲಭವನ ಸೊಸೈಟಿ, ಮ್ಯೂಸಿಯಂ ರಸ್ತೆ, ಕಬ್ಬನ್ ಪಾರ್ಕ್, ಬೆಂಗಳೂರು |
| 7 | ಕರ್ನಾಟಕ ರಾಜ್ಯ ಸಮಾಜ ಕಲ್ಯಾಣ ಮಂಡಳಿ | ಕರ್ನಾಟಕ ರಾಜ್ಯ ಸಮಾಜ ಕಲ್ಯಾಣ ಮಂಡಳಿ, ಅಭಯ ಸದನ, ಕೆ.ಎಸ್.ಡಿ.ಬಿ. ಬಿಲ್ಡಿಂಗ್, 4ನೇ ಮಹಡಿ, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು |
| 8 | ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ | ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಕೃಷಿ ಭವನ, ನೃಪತುಂಗ ರಸ್ತೆ, ಬೆಂಗಳೂರು |
| 9 | ಅಂಗವಿಕಲ ವ್ಯಕ್ತಿಗಳ ಅಧಿನಿಯಮ ಆಯುಕ್ತರ ಕಚೇರಿ | ಅಂಗವಿಕಲ ವ್ಯಕ್ತಿಗಳ ಅಧಿನಿಯಮ ಆಯುಕ್ತರ ಕಚೇರಿ, ಅಭಯ ಸಂಕೀರ್ಣ, ರಿಸಲ್ದಾರ್ ರಸ್ತೆ, ಶೇಷಾದ್ರಿಪುರ, ಬೆಂಗಳೂರು |
| 10 | ಕರ್ನಾಟಕ ಬಾಲವಿಕಾಸ ಅಕಾಡೆಮಿ | ಕರ್ನಾಟಕ ಬಾಲವಿಕಾಸ ಅಕಾಡೆಮಿ, ಚಂದ್ರಿಕಾ ಲೇಔಟ್ ಹಿಂಭಾಗ, ಕೆಹೆಚ್‌ಬಿ ಕಾಲೋನಿ, ಲಕಮನಹಳ್ಳಿ, ಧಾರವಾಡ |

****

## ಅನುಬಂಧ-02

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

(1) **ಸ್ತ್ರೀಶಕ್ತಿ ಯೋಜನೆ:** ಮಹಿಳೆಯರನ್ನು ಸ್ತ್ರೀಶಕ್ತಿ ಗುಂಪುಗಳಲ್ಲಿ ಸಂಘಟಿಸುವುದರ ಮೂಲಕ ಆರ್ಥಿಕ ಹಾಗೂ ಸಾಮಾಜಿಕ ಸಶಕ್ತತೆಯನ್ನು ತರುವ ಉದೇಶದಿಂದ ಸ್ತ್ರೀಶಕ್ತಿ ಯೋಜನೆಯನ್ನು ರಾಜ್ಯದಲ್ಲಿ ಅಕ್ಟೋಬರ್ 2000 ರಿಂದ ಜಾರಿಗೊಳಿಸಲಾಗಿದೆ.

(2) **ಸ್ವಾಧಾರ ಗೃಹ ಯೋಜನೆ:** ಸ್ವಾಧಾರ ಗೃಹಗಳಲ್ಲಿ ಸಂಕಷ್ಟಕರ ಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ತಾತ್ಕಾಲಿಕ ಆಶ್ರಯ, ಆಹಾರ, ಬಟ್ಟೆ, ವೈದ್ಯಕೀಯ ಸೇವೆ, ಸಮಾಲೋಚನೆ, ಕಾನೂನು ನೆರವು ಒದಗಿಸಲಾಗುತ್ತಿದೆ. ರಾಜ್ಯದಲ್ಲಿ 52 ಸ್ವಾಧಾರ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

(3) **ಸಾಂತ್ವನ:** ಸಮಾಜದಲ್ಲಿ ವರದಕ್ಷಿಣೆ ಕಿರುಕುಳ, ಲೈಂಗಿಕ ಕಿರುಕುಳ, ಕೌಟುಂಬಿಕ ದೌರ್ಜನ್ಯ, ಅತ್ಯಾಚಾರಕ್ಕೊಳಗಾದ ಮಹಿಳೆಯರಿಗೆ ಕಾನೂನು ನೆರವು ಹಾಗೂ ಸಮಾಲೋಚನೆಯನ್ನು ಒದಗಿಸಲಾಗುತ್ತಿದೆ. ಪ್ರಸ್ತುತ ರಾಜ್ಯದಲ್ಲಿ 123 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

(4) **ಬಾಲಕಿಯರ ವಸತಿ ನಿಲಯ:** ಹಿಂದುಳಿದ ತಾಲ್ಲೂಕುಗಳ ಗ್ರಾಮಾಂತರ ಪ್ರದೇಶದ ಹೆಣ್ಣುಮಕ್ಕಳ ವಿದ್ಯಾಭ್ಯಾಸವನ್ನು ಪ್ರೋತ್ಸಾಹಿಸಲು ಹಾಗೂ ಶಾಲೆ ಬಿಡುವುದನ್ನು ತಪ್ಪಿಸಲು ಅನುಕೂಲವಾಗುವಂತೆ, ಇಲಾಖಾ ಅನುದಾನಿತ ಸ್ವಯಂಸೇವಾ ಸಂಸ್ಥೆಗಳ ಮೂಲಕ ವಿದ್ಯಾರ್ಥಿಯನಿಯರಿಗೆ ವಸತಿ ಮತ್ತು ಭೋಜನ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಪ್ರಸ್ತುತ ರಾಜ್ಯದಲ್ಲಿ 37 ಬಾಲಕಿಯರ ವಸತಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ.

(5) **ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯ:** ಉದ್ಯೋಗಸ್ಥ ಮಹಿಳೆಯರಿಗೆ ಸುರಕ್ಷಿತ ಹಾಗೂ ಯೋಗ್ಯ ವಸತಿ ಸೌಕರ್ಯ ಕಲ್ಪಿಸುವುದು ಯೋಜನೆಯ ಉದ್ದೇಶವಾಗಿದೆ. ಈ ಯೋಜನೆಯಡಿ ಚಾಮರಾಜನಗರ ಜಿಲ್ಲಾ ಕೇಂದ್ರದಲ್ಲಿ ಜೆ.ಎಸ್.ಎಸ್. ಮಹಾವಿದ್ಯಾಪೀಠದ ವತಿಯಿಂದ ವಸತಿಗೃಹ ನಿರ್ಮಾಣಗೊಂಡಿದ್ದು, ಮಹಿಳೆಯರು ಮತ್ತು ವಿದ್ಯಾರ್ಥಿನಿಯರು ವಸತಿ ಸೌಕರ್ಯವನ್ನು ಪಡೆಯುತ್ತಿದ್ದಾರೆ. 2019-20 ಮತ್ತು 2020-21ನೇ ಸಾಲಿನಲ್ಲಿ ಈ ಯೋಜನೆಯಡಿ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. ಪ್ರಸ್ತುತ ರಾಜ್ಯದಲ್ಲಿ 65 ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ.

(6) **ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ನಿಯಮ 2006:** ಕುಟುಂಬದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯ ಉಂಟಾದಾಗ, ನ್ಯಾಯಾಲಯದ ಮುಖಾಂತರ ಮಹಿಳೆಯರಿಗೆ ಆರ್ಥಿಕ ಪರಿಹಾರ, ರಕ್ಷಣಾ ಆದೇಶ, ವಾಸದ ಆದೇಶ, ಮಕ್ಕಳ ವಶ, ತಾತ್ಕಾಲಿಕ ಆಶ್ರಯ, ವೈದ್ಯಕೀಯ ಹಾಗೂ ಕಾನೂನು ನೆರವನ್ನು ಒದಗಿಸಲು ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ಹಾಗೂ ನಿಯಮ 2006ನ್ನು ಅನುಷ್ಠಾನಗೊಳಿಸಲಾಗುತ್ತಿದೆ.

(7) **ಟ್ರಾನ್ಸಿಟ್ ಹಾಸ್ಟೆಲ್:** ಉದ್ಯೋಗ, ಸಂದರ್ಶನ, ಪ್ರವೇಶ ಪರೀಕ್ಷೆ ಹಾಗೂ ಇನ್ನಿತರೆ ಕೋರ್ಸ್‌ಗಳ ಪ್ರವೇಶ ಪರೀಕ್ಷೆಗಳಿಗೆ ಹಾಜರಾಗಲು ಬೆಂಗಳೂರಿಗೆ ಬರುವ ಮಹಿಳೆಯರಿಗೆ ಸುರಕ್ಷಿತ ಆಶ್ರಯ, ರಕ್ಷಣೆ ಹಾಗೂ ಇನ್ನಿತರ ಅಂಶಗಳನ್ನು ಪರಿಗಣಿಸಿ ಅಂತಹವರಿಗಾಗಿ ರಾಜ್ಯ ಸರ್ಕಾರದಿಂದ 11 ಟ್ರಾನ್ಸಿಟ್ ಹಾಸ್ಟೆಲ್‌ಗಳು ಕಾರ್ಯನಿರ್ವಹಿಸುತ್ತಿವೆ.

(8) **ಸ್ವೀಕಾರ ಕೇಂದ್ರ ಹಾಗೂ ರಾಜ್ಯ ಮಹಿಳಾ ನಿಲಯ:-** ಅನೈತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956 ನಿಯಮ 1989ರ ಅಡಿ ರಾಜ್ಯದಲ್ಲಿ 04 ಸ್ವೀಕಾರ ಕೇಂದ್ರಗಳು ಮತ್ತು 08 ರಾಜ್ಯ ಮಹಿಳಾ ನಿಲಯಗಳು ಸರ್ಕಾರದಿಂದ ನಡೆಸಲ್ಪಡುತ್ತಿವೆ. ಸ್ವೀಕಾರ ಕೇಂದ್ರಗಳು 18 ವರ್ಷದ ಮೇಲ್ಪಟ್ಟ ಮಹಿಳೆಯರಿಗೆ ಅಲ್ಪಾವಧಿ ಪುನರ್ವಸತಿ ಕೇಂದ್ರಗಳಾಗಿ ಹಾಗೂ ರಾಜ್ಯ ಮಹಿಳಾ ನಿಲಯಗಳು ದೀರ್ಘಾವಧಿ ಪುನರ್ವಸತಿ ಕೇಂದ್ರಗಳಾಗಿರುತ್ತವೆ. ಆಶ್ರಯ ಮತ್ತು ರಕ್ಷಣೆ ಅಗತ್ಯವಿರುವ ಮಹಿಳೆಯರು ಸ್ವ-ಇಚ್ಛೆಯಿಂದ, ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ, ಯಾವುದೇ ವ್ಯಕ್ತಿಗಳ ಮುಖಾಂತರ, ಪೊಲೀಸರ ಮುಖಾಂತರ ಹಾಗೂ ಅನೈತಿಕ

ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956ರ ಅಡಿಯಲ್ಲಿ ನ್ಯಾಯಾಲಯದಿಂದ ಪ್ರಕರಣಗಳಡಿ ದಾಖಲಿಸಲ್ಪಟ್ಟ ಮಹಿಳೆಯರಿಗೆ ಪುನರ್ವಸತಿ ಕಲ್ಪಿಸಲಾಗುತ್ತಿದೆ.

(9) **ನಿರ್ಗತಿಕ ಮಕ್ಕಳ ಕುಟೀರ**: ಅನಾಥ ಮತ್ತು ನಿರ್ಗತಿಕ ಮಕ್ಕಳ ಪಾಲನೆ/ಪೋಷಣೆ ಮಾಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಸದರಿ ಯೋಜನೆಯಡಿ ಕನಿಷ್ಠ 3 ವರ್ಷ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸಿರುವ ನೊಂದಾಯಿತ ಸ್ವಯಂ ಸೇವಾ ಸಂಸ್ಥೆಗಳಿಗೆ 25 ಮಕ್ಕಳ ಒಂದು ಘಟಕದಂತೆ ಪಾಲನೆ ಹಾಗೂ ಪೋಷಣೆಗೆ ನಿರ್ಗತಿಕ ಮಕ್ಕಳ ಕುಟೀರವನ್ನು ತೆರೆಯಲು ಅನುಮತಿಯೊಂದಿಗೆ ಧನ ಸಹಾಯವನ್ನು ನೀಡಲಾಗುವುದು. ಈ ಯೋಜನೆಯಡಿ ಪ್ರತಿ ಮಗುವಿನ ನಿರ್ವಹಣೆಗಾಗಿ ಮಾಸಿಕ ರೂ.1000/-ಗಳ ಅನುದಾನವನ್ನು ಕೊಡಲಾಗುತ್ತದೆ.

(10) **ಸುಧಾರಣಾ ಸಂಸ್ಥೆಗಳ ಕಟ್ಟಡ ದುರಸ್ಥಿ ಮತ್ತು ನಿರ್ವಹಣೆ**: ರಾಜ್ಯ ಮಹಿಳಾ ನಿಲಯ ಹಾಗೂ ಸ್ವೀಕಾರ ಕೇಂದ್ರ ಮತ್ತು ಉಪನಿರ್ದೇಶಕರ ಕಛೇರಿ ಕಟ್ಟಡ ದುರಸ್ಥಿ ಹಾಗೂ ನಿರ್ವಹಣೆಯನ್ನು ಬೇಡಿಕೆ ಹಾಗೂ ಅನುದಾನ ಲಭ್ಯತೆಗನುಗುಣವಾಗಿ ಕೈಗೊಳ್ಳಲಾಗುತ್ತಿದೆ.

(11) **ಸುಧಾರಣಾ ಸಂಸ್ಥೆಗಳ ಕಟ್ಟಡ ನಿರ್ಮಾಣ**: ರಾಜ್ಯ ಮಹಿಳಾ ನಿಲಯ ಹಾಗೂ ಸ್ವೀಕಾರ ಕೇಂದ್ರ ಮತ್ತು ಉಪನಿರ್ದೇಶಕರ ಕಛೇರಿಗಳ ಕಟ್ಟಡಗಳ ನಿರ್ಮಾಣವನ್ನು ಬೇಡಿಕೆ ಹಾಗೂ ಅನುದಾನ ಲಭ್ಯತೆಗನುಗುಣವಾಗಿ ಕೈಗೊಳ್ಳಲಾಗುತ್ತಿದೆ.

(12)**ಸ್ವೀಕಾರ ಕೇಂದ್ರ ಹಾಗೂ ರಾಜ್ಯ ಮಹಿಳಾ ನಿಲಯ**:- ಈ ಕಾರ್ಯಕ್ರಮದಡಿ ಆಶ್ರಯ ಮತ್ತು ರಕ್ಷಣೆ ಅಗತ್ಯವಿರುವ 18 ವರ್ಷ ಮೇಲ್ಪಟ್ಟ ಮಹಿಳೆಯರು ಸ್ವ-ಇಚ್ಛೆಯಿಂದ, ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ, ಯಾವುದೇ ವ್ಯಕ್ತಿಗಳ ಮುಖಾಂತರ, ಪೊಲೀಸರ ಮುಖಾಂತರ ಹಾಗೂ ಅನೈತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956ರ ಅಡಿಯಲ್ಲಿ ನ್ಯಾಯಾಲಯದಿಂದ ಪ್ರಕರಣಗಳಡಿ ದಾಖಲಿಸಲ್ಪಟ್ಟ ಮಹಿಳೆಯರು ಪುನರ್ವಸತಿ ಪಡೆಯಬಹುದಾಗಿರುತ್ತದೆ.

(13) **ನಿರ್ಗತಿಕ ಮಕ್ಕಳ ಕುಟೀರ**: ಈ ಯೋಜನೆಯಡಿ, ಅನಾಥ, ಏಕಪೋಷಕ, ನಿರ್ಗತಿಕ ಮಕ್ಕಳು ಮತ್ತು ಪಾಲನೆ ಹಾಗೂ ಪೋಷಣೆಯ ಅಗತ್ಯವಿರುವ ಮಕ್ಕಳು ಸರ್ಕಾರದಿಂದ ಮಂಜೂರಾತಿ ಪಡೆದು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿರುವ ನಿರ್ಗತಿಕ ಮಕ್ಕಳ ಕುಟೀರಗಳಿಗೆ ದಾಖಲಾಗಬಹುದಾಗಿರುತ್ತದೆ.

(14)**ಸುಧಾರಣಾ ಸಂಸ್ಥೆಗಳ ಕಟ್ಟಡಗಳ ದುರಸ್ತಿ ಮತ್ತು ನಿರ್ವಹಣೆ ಕಾರ್ಯಕ್ರಮ** ದಡಿ ಅವಶ್ಯಕತೆಗೆ ಹಾಗೂ ಅನುದಾನ ಲಭ್ಯತೆಗನುಗುಣವಾಗಿ ಜಿಲ್ಲೆಗಳಿಂದ ಬಂದ ಪ್ರಸ್ತಾವನೆಗಳನ್ನು ಪರಿಗಣಿಸಲಾಗುವುದು.

15) **ಭಾಗ್ಯಲಕ್ಷ್ಮಿ -ಸುಕನ್ಯಾ ಸಮೃದ್ಧಿ ಖಾತೆ ಯೋಜನೆ**: ಬಡತನ ರೇಖೆಗಿಂತ ಕೆಳಗಿರುವ ಕುಟುಂಬದಲ್ಲಿ ಜನಿಸಿದ 2 ಹೆಣ್ಣು ಮಕ್ಕಳಿಗೆ ಆರ್ಥಿಕ ಸೌಲಭ್ಯವನ್ನು ನೀಡಲಾಗುವುದು. ಹೆಣ್ಣು ಮಗು ಜನಿಸಿದ 2 ವರ್ಷಗಳ ವರೆಗೆ ನೋಂದಣಿ ಮಾಡಲು ಕಾಲಾವಕಾಶವಿರುತ್ತದೆ. ಈ ಯೋಜನೆಯಡಿ ಬಿಪಿಎಲ್ ಕುಟುಂಬದ 2 ಹೆಣ್ಣು ಮಕ್ಕಳಿಗೆ ಪ್ರತಿ ಮಗುವಿನ ಹೆಸರಿನಲ್ಲಿ ವಾರ್ಷಿಕ ರೂ.3000/-ರಂತೆ 15 ವರ್ಷಗಳವರೆಗೆ ಒಟ್ಟು ರೂ.45,000/-ಗಳನ್ನು ಠೇವಣಿ ಹೂಡಲಾಗುತ್ತದೆ. 21 ವರ್ಷ ಅವಧಿ ಪೂರ್ಣಗೊಂಡ ನಂತರ ಅಂದಾಜು ಪರಿಪಕ್ವ ಮೊತ್ತ ರೂ.1.27 ಲಕ್ಷ ಪ್ರಸ್ತುತ ಬಡ್ಡಿ ಸೇರಿದಂತೆ ನೀಡಲಾಗುತ್ತದೆ. 10ನೇ ತರಗತಿ ನಂತರ ಉನ್ನತ ವಿದ್ಯಾಭ್ಯಾಸಕ್ಕಾಗಿ ಖಾತೆಯಲ್ಲಿರುವ ಮೊತ್ತದ ಶೇ.50ರಷ್ಟು ಭಾಗವನ್ನು ಹಿಂಪಡೆಯಲು ಅವಕಾಶವಿರುತ್ತದೆ.

16) **ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ನಿವಾರಣೆ** : ಈ ಯೋಜನೆಯನ್ನು 2006-07ರಲ್ಲಿ ಜಾರಿಗೆ ತರಲಾಗಿದೆ. ಮಾನವ ಸಾಗಾಣಿಕೆಯನ್ನು ತಡೆಗಟ್ಟಲು ರಾಜ್ಯ, ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮ ಪಂಚಾಯತ್ ಮಟ್ಟಗಳಲ್ಲಿ ಸಮಿತಿಗಳನ್ನು ರಚಿಸಿದ್ದು, ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

17) **ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ** : ಈ ಯೋಜನೆಯು 2006-07ನೇ ಸಾಲಿನಿಂದ ಜಾರಿಗೆ ತರಲಾಗಿದೆ. 6-14 ವರ್ಷದ ವಯೋಮಿತಿಯೊಳಗಿನ ಬಾಲಕರನ್ನು ಹೊಯ್ಸಳ ಪ್ರಶಸ್ತಿಗೆ ಮತ್ತು ಬಾಲಕಿಯರನ್ನು ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಆಯ್ಕೆ ಮಾಡಲಾಗುತ್ತದೆ. ಈ ಪ್ರಶಸ್ತಿಯು ರೂ. 10,000/-ಗಳ ನಗದು ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. ಈ ಪ್ರಶಸ್ತಿಗಾಗಿ ಆಯ್ಕೆಯಾದ ಮಕ್ಕಳಿಗೆ ದ್ವಿತೀಯ ಪಿ.ಯು.ಸಿ ಪೂರೈಸುವವರೆಗೂ (18 ವರ್ಷದ ಮಿತಿಯೊಳಗೆ) ವಿದ್ಯಾಭ್ಯಾಸ ಮುಂದುವರೆಸಲು ಪ್ರತಿ ವರ್ಷ ರೂ.2,000/-ಗಳ ಶಿಷ್ಯವೇತನವನ್ನು ನೀಡಲಾಗುವುದು.

18) **ಮಕ್ಕಳ ದಿನಾಚರಣೆ ಕಾರ್ಯಕ್ರಮ** : ಅಂತರ ರಾಷ್ಟ್ರೀಯ ಮಕ್ಕಳ ವರ್ಷದ ಅಂಗವಾಗಿ ಭಾರತ ಸರ್ಕಾರವು 1979ರಲ್ಲಿ ಜಾರಿಗೆ ತಂದ ರಾಷ್ಟ್ರ ಪ್ರಶಸ್ತಿಗೆ ಅನುಗುಣವಾಗಿ ರಾಜ್ಯ ಸರ್ಕಾರವು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ನಿರತವಾಗಿರುವ ಕನಿಷ್ಠ 5 ವರ್ಷಗಳ ಕಾಲ ನಿರಂತರವಾಗಿ ಸೇವೆ ಸಲ್ಲಿಸಿದ 4 ಸಂಸ್ಥೆಗಳನ್ನು ಹಾಗೂ 4 ವ್ಯಕ್ತಿಗಳನ್ನು ಸನ್ಮಾನಿಸಲು ರಾಜ್ಯ ಪ್ರಶಸ್ತಿಯನ್ನು ಜಾರಿಗೆ ತಂದಿರುತ್ತದೆ. ಈ ಪ್ರಶಸ್ತಿಯನ್ನು ಪ್ರತಿ ವರ್ಷ ನವಂಬರ್-14 ರಂದು ಆಚರಿಸಲಾಗುವ ಮಕ್ಕಳ ದಿನಾಚರಣೆಯ ದಿನದಂದು ನೀಡಲಾಗುವುದು.

19) **ಉಜ್ವಲ ಯೋಜನೆ** : ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ತಡೆಗಟ್ಟಲು ಹಾಗೂ ಸಾಗಾಣಿಕೆಗೆ ಹಾಗೂ ವಾಣಿಜ್ಯ ಲೈಂಗಿಕ ದುರುಪಯೋಗಕ್ಕೆ ಒಳಪಟ್ಟವರನ್ನು ರಕ್ಷಿಸಲು, ಇವರಿಗೆ ಪುನರ್‌ವಸತಿ ಕಲ್ಪಿಸಲು ಮತ್ತು ಕುಟುಂಬದವರೊಂದಿಗೆ ಪುನರ್ ವಿಲೀನಗೊಳಿಸಲು ಉಜ್ವಲ ಎಂಬ ಸಮಗ್ರ ಯೋಜನೆಯನ್ನು ರೂಪಿಸಲಾಗಿದೆ.. ಸದರಿ ಯೋಜನೆಯನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ. ರಾಜ್ಯದಲ್ಲಿ ಪ್ರಸ್ತುತ 15 ಉಜ್ವಲ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ.

20) **ಬೇಟಿ ಬಚಾವೋ ಬೇಟಿ ಪಡಾವೋ**: ಕುಸಿಯುತ್ತಿರುವ ಮಕ್ಕಳ ಲಿಂಗ ಅನುಪಾತವನ್ನು(ಆಜಛಿಟುಟಿಟರ ಅಖಖ) ಉತ್ತಮ ಪಡಿಸುವುದು ಹಾಗೂ ಮಹಿಳೆಯರನ್ನು ಸಬಲೀಕರಣಗೊಳಿಸುವುದು **"ಬೇಟಿ ಬಚಾವೋ ಬೇಟಿ ಪಡಾವೋ"** ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಈ ಯೋಜನೆಯನ್ನು ವಿಜಯಪುರ, ಬಾಗಲಕೋಟೆ, ಹಾವೇರಿ, ಗದಗ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

## ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

(ಎ) **ಶೈಕ್ಷಣಿಕ ಯೋಜನೆಗಳು:-**

**1) ಶ್ರವಣದೋಷವುಳ್ಳ ಮಕ್ಕಳಿಗಾಗಿ ಸರ್ಕಾರದ ವಸತಿಯುತ ಶಾಲೆಗಳು:**

ಶ್ರವಣದೋಷವುಳ್ಳ ಮಕ್ಕಳಿಗಾಗಿ ಮೈಸೂರು, ಕಲಬುರ್ಗಿ, ಬಳ್ಳಾರಿ, ಬೆಳಗಾವಿ ಜಿಲ್ಲೆಗಳಲ್ಲಿ 4 ಕಿವುಡು ಮಕ್ಕಳ ವಸತಿ ಶಾಲೆಗಳನ್ನು ಇಲಾಖಾವತಿಯಿಂದ ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಬೆಳಗಾವಿಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ. ಇತ್ತೀಚೆಗೆ ಬೆಂಗಳೂರಿನಲ್ಲಿ ಶ್ರವಣದೋಷವುಳ್ಳ ಮಕ್ಕಳ ವಸತಿ ರಹಿತ ಶಾಲೆಯನ್ನು ಸರ್ಕಾರದ ವಶಕ್ಕೆ ಪಡೆದು ನಡೆಸಲಾಗುತ್ತಿದೆ.

**2. ಅಂಧ ಮಕ್ಕಳಿಗಾಗಿ ಸರ್ಕಾರದ ವಸತಿಯುತ ಶಾಲೆಗಳು:**

ಅಂಧ ಮಕ್ಕಳಿಗಾಗಿ ಕಲಬುರ್ಗಿ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಯಲ್ಲಿ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ದೃಷ್ಟಿದೋಷವುಳ್ಳ ಮಕ್ಕಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ದೃಷ್ಟಿದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ದಾವಣಗೆರೆಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

**3. 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳು:**

1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 34 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ.ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ.

**4. ವಿಕಲಚೇತನರಿಗೆ ವೃತ್ತಿ ತರಬೇತಿ ಕೇಂದ್ರಗಳು:**

ಈ ಯೋಜನೆಯಡಿ ವಿವಿಧ ರೀತಿಯ ವಿಕಲಚೇತನರಿಗೆ ವೃತ್ತಿ ತರಬೇತಿಯನ್ನು ನೀಡುವುದಾಗಿದೆ. 1982ರ ರಾಜ್ಯ ಅನುದಾನ ಸಂಹಿತೆಯಡಿ 5 ವೃತ್ತಿ ತರಬೇತಿ ಕೇಂದ್ರಗಳನ್ನು ರಾಜ್ಯ ಸಹಾಯಾನುದಾನದಡಿ ಬೆಂಗಳೂರಿನಲ್ಲಿ 03 ಮತ್ತು ಮೈಸೂರಿನಲ್ಲಿ 02 ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಂದು ವಾಕ್ ಶ್ರವಣ ಕೇಂದ್ರವನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ. ವೃತ್ತಿ ತರಬೇತಿ ಕೇಂದ್ರಗಳಲ್ಲಿ ವಿವಿಧ ರೀತಿಯ ವಿಕಲಚೇತನರಿಗೆ ಫಿಟ್ಟರ್, ಟರ್ನರ್, ಸರಳ ಇಂಜಿನಿಯರಿಂಗ್, ಬೆತ್ತ, ಹಗ್ಗ, ಚಾಪೆ ಹೆಣೆಯುವುದು ಹಾಗೂ ಪ್ಲಾಸ್ಟಿಕ್ ಮೌಲ್ಡಿಂಗ್ ತರಬೇತಿಯನ್ನು ನೀಡಲಾಗುತ್ತಿದೆ.ಪ್ರತಿ ತರಬೇತಿ ಕೇಂದ್ರದಲ್ಲಿ ವಾರ್ಷಿಕ 25 ಫಲಾನುಭವಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

**5. ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ ನಡೆಯುತ್ತಿರುವ ವಿಶೇಷ ಶಾಲೆಗಳು:**

ಈ ಯೋಜನೆಯಡಿ ಬುದ್ದಿಮಾಂದ್ಯ (ಸೆರಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 141 ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶ್ರವಣದೋಷವುಳ್ಳ ಹಾಗೂ ದೃಷ್ಟಿದೋಷವುಳ್ಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6200/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.5200/- ರಂತೆ ಹಾಗೂ ಬುದ್ದಿಮಾಂದ್ಯ ಮಕ್ಕಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6800/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ. 6000/- ರಂತೆ ವರ್ಷದಲ್ಲಿ 10 ತಿಂಗಳ ಅವಧಿಗೆ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ.ಈ ಅನುದಾನದಲ್ಲಿ ಶಿಕ್ಷಕರ ಗೌರವಧನ, ಮಕ್ಕಳ ಆಹಾರ

ವೆಚ್ಚ, ಕಟ್ಟಡದ ಬಾಡಿಗೆ ಹಾಗೂ ನಿರ್ವಹಣಾ ವೆಚ್ಚ, ಸಮವಸ್ತ್ರ, ವೈದ್ಯಕೀಯ ವೆಚ್ಚ ಹಾಗೂ ಸಾದಿಲ್ವಾರು ವೆಚ್ಚಗಳು ಒಳಗೊಂಡಿರುತ್ತವೆ.

**6.** ಕೇಂದ್ರ ಸರ್ಕಾರದ ದೀನ್‌ದಯಾಳ್ ಪುನರ್ವಸತಿ ಯೋಜನೆಯಡಿ 8 ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಶೇಷ ಶಾಲೆ /ವೃತ್ತಿ ತರಬೇತಿ ಕೇಂದ್ರಗಳು ನಡೆಯುತ್ತಿದ್ದು, ಸದರಿ ಶಾಲೆ ಹಾಗೂ ತರಬೇತಿ ಕೇಂದ್ರಗಳಿಗೆ ಕೇಂದ್ರ ಸರ್ಕಾರದಿಂದ ಶೇ.90ರಷ್ಟು ಅನುದಾನವನ್ನು ಮಂಜೂರು ಮಾಡಲಾಗುತ್ತಿದ್ದು, ಉಳಿದ ಶೇ.10ರಷ್ಟು ವೆಚ್ಚವನ್ನು ಸಂಸ್ಥೆಯವರು ಭರಿಸಬೇಕಾಗಿರುತ್ತದೆ.

7. <u>ಅಂಗವಿಕಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹಧನ:</u>

ಈ ಯೋಜನೆಯಡಿ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಆಯಾ ಜಿಲ್ಲಾ ಕಛೇರಿಗಳ ಮೂಲಕ ಮಂಜೂರು ಮಾಡಲಾಗುತ್ತಿದೆ. 2001–02ನೇ ಸಾಲಿನಿಂದ ಈ ಯೋಜನೆಯ ಫಲಾನುಭವಿಗಳಿಗೆ ಆದಾಯ ಮಿತಿಯಿಂದ ವಿನಾಯಿತಿಗೊಳಿಸಲಾಗಿದೆ.

**8. <u>ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಯೋಜನೆ:</u>**

ಸಾರ್ವತ್ರಿಕ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಯೋಜನೆ ಇದಾಗಿದೆ.ಈ ಯೋಜನೆಯನ್ನು 2001–02ನೇ ಸಾಲಿನಿಂದ ಬಿ.ಎಡ್, ಎಂ.ಎಡ್. ಮತ್ತು ಟಿ.ಸಿ.ಹೆಚ್. ವಿದ್ಯಾರ್ಥಿಗಳಿಗೂ ವಿಸ್ತರಿಸಲಾಗಿದೆ.

**9. <u>ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:</u>**

ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯನ್ನು 2013–14ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯಮಿತಿ ಇರುವುದಿಲ್ಲ.

**10. <u>ಬ್ರೈಲ್ ಮುದ್ರಣಾಲಯ:</u>**

ರಾಜ್ಯಾದ್ಯಂತ ವಿಶೇಷ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ದೃಷ್ಟಿದೋಷವುಳ್ಳ ಮಕ್ಕಳಿಗೆ ಬ್ರೈಲ್ ಪುಸ್ತಕಗಳನ್ನು ಉಚಿತವಾಗಿ ನೀಡಲು ಮೈಸೂರಿನಲ್ಲಿರುವ ಬ್ರೈಲ್ ಮುದ್ರಣಾಲಯದಲ್ಲಿ ಮುದ್ರಿಸಿ ಸರಬರಾಜು ಮಾಡಲಾಗುತ್ತಿದೆ.

11. **<u>ವಿಶೇಷ ಶಿಕ್ಷಕರ ತರಬೇತಿ ಕೇಂದ್ರ ಯೋಜನೆ:</u>**

ದೃಷ್ಟಿದೋಷವುಳ್ಳ ಹಾಗೂ ಶ್ರವಣದೋಷವುಳ್ಳ ವಿದ್ಯಾರ್ಥಿಗಳಿಗೆ ಬೋಧಿಸುವ ಶಿಕ್ಷಕರಿಗೆ ವಿಶೇಷ ಶಿಕ್ಷಣ ನೀಡಲು ತಲಾ ಒಂದರಂತೆ ವಿಶೇಷ ಶಿಕ್ಷಕರ ತರಬೇತಿ ಕೇಂದ್ರವನ್ನು ಮೈಸೂರಿನಲ್ಲಿ ನಡೆಸುತ್ತಿದ್ದು, ಪ್ರತಿ ವರ್ಷ ಪ್ರತಿ ಕೇಂದ್ರದಲ್ಲಿ 25 ಪ್ರಶಿಕ್ಷಣಾರ್ಥಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

**12. <u>ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು:</u>** ಸೆರಬ್ರಲ್ ಪಾಲ್ಸಿ, ಆಟಿಸಂ, ಮಾನಸಿಕ ಅಸ್ವಸ್ಥ ಹಾಗೂ ತೀವ್ರತರದ ಅಂಗವೈಕಲ್ಯತೆ ಹೊಂದಿರುವ ಮೂರರಿಂದ 25 ವರ್ಷದ ಒಳಗಿನ ಮಕ್ಕಳಿಗಾಗಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ

ಮೂಲಕ ನಡೆಸುತ್ತಿದ್ದು, ಪ್ರತಿ ಕೇಂದ್ರದಲ್ಲಿ 25 ಮಕ್ಕಳನ್ನು ದಾಖಲಿಸಲು ಅವಕಾಶವಿದ್ದು, ಪ್ರತಿ ಮಗುವಿಗೆ ಮಾಸಿಕ ರೂ.10,000/-ಗಳಂತೆ ವಾರ್ಷಿಕ 25.00 ಲಕ್ಷಗಳನ್ನು ಮಂಜೂರು ಮಾಡಲಾಗುತ್ತಿದೆ.

**(ಬಿ) ಉದ್ಯೋಗ ಮತ್ತು ತರಬೇತಿ:**

**1. ಅಂಗವಿಕಲ ಪುರುಷ ಹಾಗೂ ಮಹಿಳೆಯರ ಸರ್ಕಾರಿ ವಸತಿನಿಲಯ:**

ಬೆಂಗಳೂರಿನಲ್ಲಿ ವಿಕಲಚೇತನ ಮಹಿಳೆ ಮತ್ತು ವಿಕಲಚೇತನ ಪುರುಷರಿಗಾಗಿ ಅಂಗವಿಕಲ ಉದ್ಯೋಗಸ್ಥ ನೌಕರರು ಮತ್ತು ಪ್ರಶಿಕ್ಷಣಾರ್ಥಿಗಳಿಗಾಗಿ ಮಹಿಳೆಯರು ಹಾಗೂ ಪುರುಷರಿಗಾಗಿ ಪ್ರತ್ಯೇಕವಾದ ವಸತಿ ನಿಲಯವನ್ನು ಸರ್ಕಾರದಿಂದ ನಡೆಸಲಾಗುತ್ತಿದೆ. ಪ್ರಸ್ತುತ ಈ ಎರಡೂ ವಸತಿ ನಿಲಯಗಳು ಬೆಂಗಳೂರಿನ ಕೆಂಗೇರಿಯಲ್ಲಿ ನಡೆಸಲಾಗುತ್ತಿದೆ. ಪ್ರತಿ ವಸತಿ ನಿಲಯದಲ್ಲಿ 50 ನಿವಾಸಿಗಳನ್ನು ದಾಖಲಿಸಲು ಅವಕಾಶವಿರುತ್ತದೆ.

**2. ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ವಸತಿ ನಿಲಯಗಳು:**

ಅಂಗವಿಕಲ ಉದ್ಯೋಗಸ್ಥ ಮಹಿಳೆಯರಿಗಾಗಿ ಹಾಗೂ ವಿದ್ಯಾರ್ಥಿನಿ/ತರಬೇತಿದಾರರಿಗೆ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 25 ಜಿಲ್ಲೆಗಳಲ್ಲಿ ಮಹಿಳಾ ವಸತಿ ನಿಲಯಗಳು (ಬೆಂಗಳೂರು ನಗರ ಜಿಲ್ಲೆಯಲ್ಲಿ 4 ವಸತಿ ನಿಲಯಗಳು) ನಡೆಯುತ್ತಿವೆ. ಸದರಿ ವಸತಿ ನಿಲಯದಲ್ಲಿ ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಮತ್ತು ವಿದ್ಯಾರ್ಥಿನಿಯರಿಗೆ ಹಾಗೂ ತರಬೇತಿದಾರರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಿದ್ದು, ವಿದ್ಯಾರ್ಥಿನಿಯರು ಹಾಗೂ ತರಬೇತಿದಾರರಿಗೆ ಮಾತ್ರ ಉಚಿತ ಊಟದ ವ್ಯವಸ್ಥೆ ಇರುತ್ತದೆ.

**3. ಗ್ರಾಮೀಣ ಪುನರ್ವಸತಿ ಯೋಜನೆ:**

ಈ ಯೋಜನೆಯನ್ನು ರಾಜ್ಯದ ಎಲ್ಲಾ 30 ಜಿಲ್ಲೆಗಳ 176 ತಾಲ್ಲೂಕುಗಳಲ್ಲಿ ಅನುಷ್ಠಾನ ಗೊಳಿಸಲಾಗುತ್ತಿದೆ. ಪ್ರತಿ ಗ್ರಾಮ ಪಂಚಾಯತಿ ಅಡಿಯಲ್ಲಿ ಎಸ್.ಎಸ್.ಎಲ್.ಸಿ. ಉತ್ತೀರ್ಣ/ ಅನುತ್ತೀರ್ಣರಾದ ಸಮರ್ಥ ವಿಕಲಚೇತನರನ್ನು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರೆಂದು ಹಾಗೂ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಸ್ಥಳೀಯ ಪದವೀಧರ ವಿಕಲಚೇತನರೊಬ್ಬರನ್ನು ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರೆಂದು, ಸ್ಥಳೀಯ ನಗರ ಪ್ರದೇಶಗಳಲ್ಲಿ ನಗರ ಪುನರ್ವಸತಿ ಕಾರ್ಯಕರ್ತರೆಂದು ಮತ್ತು ನಿರ್ದೇಶನಾಲಯದಲ್ಲಿ ರಾಜ್ಯ ಸಂಯೋಜಕರನ್ನು ಗೌರವಧನ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ. ಈ ಕಾರ್ಯಕರ್ತರ ಮೂಲಕ ವಿಕಲಚೇತನರಿಗೆ ಎಲ್ಲಾ ಸೇವಾ ಸೌಲಭ್ಯಗಳನ್ನು ಅವರಿರುವ ಸ್ಥಳಗಳಲ್ಲಿಯೇ ವಿಕಲಚೇತನರ ಮೂಲಕವೇ ತಲುಪಿಸಲಾಗುವುದು.

ಪ್ರಸ್ತುತ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ನಗರ ಪುನರ್ವಸತಿ ಕಾರ್ಯಕರ್ತರುಗಳಿಗೆ ಮಾಹೆಯಾನ ರೂ.6000/- ಗೌರವಧನವನ್ನು ಹಾಗೂ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರುಗಳಿಗೆ ಮಾಹೆಯಾನ ರೂ.12,000/-ಗಳ ಗೌರವಧನವನ್ನು ನೀಡಲಾಗುತ್ತಿದೆ.

**ಮರಣ ಪರಿಹಾರ ನಿಧಿ ಯೋಜನೆ:** ಪ್ರಸ್ತುತ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಕಾರ್ಯಕರ್ತರು ನಿಧನ ಹೊಂದಿದ್ದಲ್ಲಿ ರೂ.50,000/-ಗಳ ಪರಿಹಾರ ಧನ ನೀಡಲು ಅವಕಾಶವಿರುತ್ತದೆ.

**ಸಿ. ಆರ್ಥಿಕ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳು:**

**1. ಸಮಾಜ ಸೇವಾ ಸಂಕೀರ್ಣ:**

ನಿರ್ಗತಿಕ ಬುದ್ದಿಮಾಂದ್ಯ ಪುರುಷರಿಗಾಗಿ ಸಮಾಜ ಸೇವಾ ಸಂಕೀರ್ಣ ಸಂಸ್ಥೆಯು ಬೆಂಗಳೂರಿನಲ್ಲಿ ಸರ್ಕಾರದ ವತಿಯಿಂದ ನಡೆಯುತ್ತಿದ್ದು, ಈ ಸಂಸ್ಥೆಯಲ್ಲಿ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ, ಸಂರಕ್ಷಣೆ ಒದಗಿಸಲಾಗುತ್ತಿದೆ. ಪ್ರಸ್ತುತ ಸಂಸ್ಥೆಯಲ್ಲಿ 80 ನಿವಾಸಿಗಳು ದಾಖಲಾಗಿರುತ್ತಾರೆ.

**2. ಮಂದಮತಿ ಮಹಿಳೆಯರ ಅನುಪಾಲನಾ ಗೃಹ:**

18 ವರ್ಷ ಮೇಲ್ಪಟ್ಟ ನಿರ್ಗತಿಕ ಮಹಿಳಾ ಬುದ್ಧಿಮಾಂದ್ಯರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ ಮತ್ತು ಸಂರಕ್ಷಣೆ ಒದಗಿಸುವ ಉದ್ದೇಶದಿಂದ ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳನ್ನು ಬೆಂಗಳೂರು ನಗರ ಹಾಗೂ ಹುಬ್ಬಳ್ಳಿಯಲ್ಲಿ ಇಲಾಖಾವತಿಯಿಂದ ನಡೆಸಲಾಗುತ್ತಿದೆ. ಪ್ರಸ್ತುತ ಬೆಂಗಳೂರು ಅನುಪಾಲನಾ ಕೇಂದ್ರದಲ್ಲಿ 100 ಮಂದಿ ಹಾಗೂ ಹುಬ್ಬಳ್ಳಿ ಅನುಪಾಲನ ಕೇಂದ್ರದಲ್ಲಿ 70 ನಿವಾಸಿಗಳು ದಾಖಲಾಗಿರುತ್ತಾರೆ.

**3. ಮಾನಸಿಕ ಅಸ್ವಸ್ಥರಿಗೆ ಮಾನಸ ಕೇಂದ್ರಗಳು:**

ಮಾನಸಿಕ ಅಸ್ವಸ್ಥರಿಗಾಗಿ ಮಾನಸ ಕೇಂದ್ರಗಳನ್ನು ಬೆಂಗಳೂರು ನಗರ ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ನಡೆಸುತ್ತಿದ್ದು, ರಾಜ್ಯ ಉಚ್ಚ ನ್ಯಾಯಾಲಯ ಮತ್ತು ಅಧೀನ ನ್ಯಾಯಾಲಯಗಳಿಂದ ಆದೇಶಿಸಲ್ಪಡುವ ಮಾನಸಿಕ ಅಸ್ವಸ್ಥರನ್ನು ಹಾಗೂ ರಸ್ತೆಗಳಲ್ಲಿ ಓಡಾಡುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಲ್ಲಿ ನಿರ್ದಿಷ್ಟ ವೈದ್ಯಕೀಯ ಪ್ರಾಧಿಕಾರದ ಆದೇಶದ ಮೇರೆಗೆ ದಾಖಲಿಸಲು ಅವಕಾಶವಿರುತ್ತದೆ. ಈ ಕೇಂದ್ರಗಳಲ್ಲಿ ಫಲಾನುಭವಿಗಳಿಗೆ ಉಚಿತ ಊಟ, ವಸತಿ, ವೈದ್ಯಕೀಯ ಶುಶ್ರೂಷೆ, ವೈದ್ಯಕೀಯ ಸಲಹೆ(ಕೌನ್ಸಲಿಂಗ್) ಸೌಲಭ್ಯವನ್ನು ನೀಡಲಾಗುತ್ತಿದ್ದು, ಇವು ಅಲ್ಪಾವಧಿ ಕೇಂದ್ರಗಳಾಗಿರುತ್ತವೆ.

**4. ಬುದ್ಧಿಮಾಂದ್ಯ ಮಕ್ಕಳ ಪೋಷಕರಿಗೆ ವಿಮಾ ಯೋಜನೆ:**

ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ: ತಾಯಿ: ಪೋಷಕರ ವಿಮಾ ಯೋಜನೆಯನ್ನು ಭಾರತೀಯ ಜೀವ ವಿಮಾ ನಿಗಮದ ಮೂಲಕ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಬುದ್ದಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ:ತಾಯಿ: ಪೋಷಕರು ಮರಣ ಹೊಂದಿದ ನಂತರ ಬುದ್ಧಿಮಾಂದ್ಯ ಮಕ್ಕಳ ಜೀವನ ನಿರ್ವಹಣೆಗಾಗಿ ರೂ.20,000/-ಗಳ ಪರಿಹಾರ ಧನವನ್ನು ಕುಟುಂಬದ ನಾಮ ನಿರ್ದೇಶಿತ ಸದಸ್ಯರಿಗೆ ಪಾವತಿಸಲಾಗುತ್ತಿದೆ.

**5. ವಿಕಲಚೇತನ ವ್ಯಕ್ತಿಗಳನ್ನು ಸಾಮಾನ್ಯರು ಮದುವೆಯಾದಲ್ಲಿ ಪ್ರೋತ್ಸಾಹ ಧನ ನೀಡುವ ಯೋಜನೆ:**

ವಿಕಲಚೇತನ ಯುವಕ/ಯುವತಿಯರನ್ನು ವಿವಾಹವಾಗುವ ಸಾಮಾನ್ಯ ಯುವಕ/ ಯುವತಿಯರಿಗೆ ನಿರಂತರವಾಗಿ ಮಾಸಿಕ ಆದಾಯ ದೊರಕಿಸಲು ವಿಕಲಚೇತನ ವ್ಯಕ್ತಿಯ ಹೆಸರಿನಲ್ಲಿ ರೂ.50,000/-ಗಳನ್ನು ಮದುವೆಯಾದ ಸಾಮಾನ್ಯ ವ್ಯಕ್ತಿ ಹಾಗೂ ವಿಕಲಚೇತನರ ಜಂಟಿ ಹೆಸರಿನಲ್ಲಿ 05 ವರ್ಷದ ಅವಧಿಗೆ ಹೂಡಿಕೆಯ ರೂಪದಲ್ಲಿ ನೀಡಿ ಪ್ರೋತ್ಸಾಹ ನೀಡಲು ಹಾಗೂ ಅದರಿಂದ ಬರುವ ಬಡ್ಡಿ ಹಣವನ್ನು ಉಪಯೋಗಿಸುವುದು ಹಾಗೂ 05 ವರ್ಷಗಳ ನಂತರ ಠೇವಣಿ ಮೊತ್ತವನ್ನು ವಾಪಸ್ಸು ಪಡೆಯಬಹುದು ಅಥವಾ ಮುಂದುವರೆಸಲು ಅವಕಾಶವಿರುತ್ತದೆ.

**6. ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಭತ್ಯೆ ಒದಗಿಸುವ ಯೋಜನೆ :**

ಅಂಧ ಮಹಿಳೆಯರು ಮಗುವಿಗೆ ಜನ್ಮ ನೀಡಿದಾಗ ಆ ಮಗುವನ್ನು ಇತರೆ ಸಾಮಾನ್ಯ ತಾಯಂದಿರಂತೆ ಆರೈಕೆ ಮಾಡುವುದು ಕಷ್ಟಕರವಾಗಿರುತ್ತದೆ.ಇಂತಹ ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಮಾಡಲು ಆಯಾ ಸೇವೆ, ಆರೋಗ್ಯ ಪಾಲನೆ, ಪೌಷ್ಠಿಕ ಆಹಾರ, ಔಷಧೋಪಚಾರಗಳಿಗೆ ಮಾಹೆಯಾನ ರೂ.2000/- ದಂತೆ **5 ವರ್ಷಗಳ** ಅವಧಿಗೆ ಸಹಾಯಧನವನ್ನು ನೀಡಲಾಗುತ್ತಿದೆ.ಈ ಸೌಲಭ್ಯವನ್ನು ಕನಿಷ್ಠ 2 ಮಕ್ಕಳವರೆಗೆ ಪಡೆಯಬಹುದಾಗಿದೆ.

**7. ನಿರುದ್ಯೋಗ ಭತ್ಯೆ:-** ಎಸ್.ಎಸ್.ಎಲ್.ಸಿ ಹಾಗೂ ನಂತರ ವ್ಯಾಸಂಗ ಮಾಡಿರುವ ನಿರುದ್ಯೋಗಿ ವಿಕಲಚೇತನರಿಗೆ ಮಾಸಿಕ ರೂ.1000/-ಗಳ ನಿರುದ್ಯೋಗ ಭತ್ಯೆಯನ್ನು ಮಂಜೂರು ಮಾಡಲಾಗುತ್ತಿದೆ.

**(ಡಿ) ಪುನರ್ವಸತಿ ಯೋಜನೆಗಳು:**

1. **ಅಂಗವಿಕಲರಿಗೆ ಸಾಧನ ಸಲಕರಣೆಗಳು :**

ಈ ಯೋಜನೆಯಡಿಯಲ್ಲಿ ಅಂಗವಿಕಲರಿಗೆ ಅವಶ್ಯವಾಗಿರುವ ಸಾಧನ ಸಲಕರಣೆಗಳನ್ನು ನೀಡ ಲಾಗುತ್ತಿದೆ. ಫಲಾನುಭವಿಯ ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ಗ್ರಾಮೀಣ ಪ್ರದೇಶದ ಫಲಾನುಭವಿಗಳಿಗೆ ರೂ.11,500/- ಮತ್ತು ನಗರ ಪ್ರದೇಶದ ಫಲಾನುಭವಿಗಳಿಗೆ ರೂ.24,000/- ನಿಗದಿಗೊಳಿಸಲಾಗಿದೆ. ಈ ಯೋಜನೆಯಡಿ ರೂ.15,000/-ಗಳ ಮಿತಿಯೊಳಗೆ ವಿಕಲಚೇತನರಿಗೆ ಅವಶ್ಯವಿರುವ ಗಾಲಿ ಕುರ್ಚಿ, ಸಾದಾ ತ್ರಿಚಕ್ರವಾಹನ, ಕ್ಯಾಲಿಪರ್ಸ್, ಕ್ರಚಸ್, ಶ್ರವಣ ಸಾಧನ, ವೈಟ್ ಕೇನ್, ಬ್ರೈಲ್ ವಾಚ್ ಇನ್ನಿತರ ಸಲಕರಣೆಗಳನ್ನು ಉಚಿತವಾಗಿ ನೀಡಲಾಗುತ್ತಿದೆ.

2. **ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ :**

ಎಸ್.ಎಸ್.ಎಲ್.ಸಿ ನಂತರ ವ್ಯಾಸಂಗ ಮಾಡುವ ದೃಷ್ಟಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗುವಂತೆ ಮಾತನಾಡುವ (ಟಾಕಿಂಗ್) ಲ್ಯಾಪ್‌ಟಾಪ್‌ಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲಾಗುತ್ತಿದೆ

3. **ತೀವ್ರತರಹ ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ :**

20 ರಿಂದ 60 ವರ್ಷದ ವಯೋಮಾನದ ತೀವ್ರತರವಾದ ದೈಹಿಕ ವಿಕಲಚೇತನರಿಗೆ ಓಡಾಡಲು ಅನುಕೂಲವಾಗುವಂತೆ ಜೀವಿತ ಕಾಲದಲ್ಲಿ ಒಂದು ಬಾರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ಮಂಜೂರು ಮಾಡಲಾಗುತ್ತದೆ. ಈ ಯೋಜನೆಯಡಿ ಫಲಾನುಭವಿಯ ಕುಟುಂಬದ ವಾರ್ಷಿಕ ವರಮಾನ ರೂ.2.00 ಲಕ್ಷಗಳಿಗಿಂತ ಕಡಿಮೆ ಇರಬೇಕಾಗಿರುತ್ತದೆ.

4. **ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ಯೋಜನೆ:-**

ವಿಕಲಚೇತನರನ್ನು ಗುರುತಿಸಿ ಅವರಿಗೆ ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ, ಸಾಮಾಜಿಕ ಭದ್ರತೆ ಹಾಗೂ ಪುನರ್ವಸತಿ ಸೇವೆಗಳನ್ನು ಅವರ ಮನೆ ಬಾಗಿಲಿನಲ್ಲಿಯೇ ಒದಗಿಸಿ ಅವರ ಸರ್ವಾಂಗೀಣ ಪುನರ್ವಸತಿಯನ್ನು ಕಲ್ಪಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಈ ಯೋಜನೆಯಡಿ ವಿಕಲಚೇತನರಿಗೆ ಅಗತ್ಯವಿರುವ ವೈದ್ಯಕೀಯ ಸೇವೆ, ವೃತ್ತಿ ಚಿಕಿತ್ಸೆ, ವಿವಿಧ ರೀತಿಯ ಸಾಧನ ಸಲಕರಣೆಗಳನ್ನು ಕೇಂದ್ರಗಳಲ್ಲಿ ತಯಾರಿಸಿ ಒದಗಿಸಲಾಗುವುದು. ಪ್ರಸ್ತುತ 16 ಜಿಲ್ಲೆಗಳಲ್ಲಿ ಜಿಲ್ಲಾ ಪುನರ್ವಸತಿ ಕೇಂದ್ರಗಳು ನಡೆಯುತ್ತಿವೆ. (ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಳಗಾವಿ, ಬೀದರ್, ಚಿತ್ರದುರ್ಗ, ದಕ್ಷಿಣ ಕನ್ನಡ, ಮೈಸೂರು, ಉಡುಪಿ, ಹಾಸನ, ವಿಜಯಪುರ, ರಾಯಚೂರು, ಚಿಕ್ಕಮಗಳೂರು, ಬಳ್ಳಾರಿ, ಹಾವೇರಿ, ಚಾಮರಾಜನಗರ, ಗದಗ)

5. **ಅಂಗವಿಕಲತೆಯನ್ನು ನಿವಾರಿಸುವ ಶಸ್ತ್ರಚಿಕಿತ್ಸೆಗಾಗಿ ವೈದ್ಯಕೀಯ ಪರಿಹಾರ ನಿಧಿ ಯೋಜನೆ:-**

ಅಂಗವಿಕಲ ವ್ಯಕ್ತಿಗಳಿಗೆ ಅಂಗವಿಕಲತೆಯನ್ನು ನಿವಾರಿಸಲು ಶಸ್ತ್ರ ಚಿಕಿತ್ಸೆಗಾಗಿ ಸರ್ಕಾರಿ ಆಸ್ಪತ್ರೆ, ಸಂಜಯಗಾಂಧಿ ಆಸ್ಪತ್ರೆಗಳಲ್ಲಿ ಹಾಗೂ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಅಂಗವಿಕಲತೆ ನಿವಾರಣಾ ಶಸ್ತ್ರ ಚಿಕಿತ್ಸೆಗಾಗಿ ರೂ.1.00 ಲಕ್ಷಗಳವರೆಗೆ ಸಹಾಯ ಧನವನ್ನು ಮಂಜೂರು ಮಾಡಲಾಗುತ್ತಿದೆ.

6. **ಅಂಧ ವಿದ್ಯಾರ್ಥಿಗಳೀಗೆ ಬ್ರೈಲ್ ಕಿಟ್‌ಗಳ ವಿತರಿಸುವ ಯೋಜನೆ:-**

ಅಂಧ ವಿದ್ಯಾರ್ಥಿಗಳು ತಮ್ಮ ದೈನಂದಿನ ಚಟುವಟಿಕೆಗಳಲ್ಲಿ ಸ್ವಾವಲಂಬಿಗಳಾಗಲು ರಾಜ್ಯದ ಅಂಧ ವಿದ್ಯಾರ್ಥಿಗಳಿಗೆ ಟಾಂಕಿಗ್ ಮೊಬೈಲ್, ಬ್ರೈಲ್ ವಾಚ್, ವಾಕಿಂಗ್ ಸ್ಟಿಕ್ ಮತ್ತು ಇನ್ನಿತರ ಸಾಧನೆಗಳನ್ನು ಒಳಗೊಂಡ ತಲಾ ರೂ.25000/-ಗಳ ಕಿಟ್‌ಗಳನ್ನು ವಿತರಿಸಲಾಗುತ್ತಿದೆ.

7. **ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರವನ್ನು ವಿತರಿಸುವ ಯೋಜನೆ:-**

ಶ್ರವಣದೋಷವುಳ್ಳವರು ಉದ್ಯೋಗಾವಕಾಶದಿಂದ ವಂಚಿತರಾಗುತ್ತಿರುವುದನ್ನು ಮನಗಂಡು ಅವರು ಸ್ವಯಂ ಉದ್ಯೋಗ ಕೈಗೊಂಡು ಸ್ವಾವಲಂಬಿಗಳಾಗಲು ಅನುವಾಗುವಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರವನ್ನು ವಿತರಿಸಲಾಗುತ್ತಿದೆ.

**(ಇ). ಸಾಧನೆ ಮತ್ತು ಪ್ರತಿಭೆ ಯೋಜನೆ:**

ವಿಕಲಚೇತನ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡಲು "ಸಾಧನೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ಕ್ರೀಡೆಗಳಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರಿಗೆ ರೂ.50,000/-ಗಳ ಧನ ಸಹಾಯವನ್ನು ನೀಡಲಾಗುತ್ತಿದೆ.

ವಿಕಲಚೇತನರು ನೀಡುವ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡುವ ಸಲುವಾಗಿ "ಪ್ರತಿಭೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ವೈಯಕ್ತಿಕ ಸಾಂಸ್ಕೃತಿಕ ರೂ.2,000/-ಗಳು ಹಾಗೂ ಸಮೂಹ ಕಾರ್ಯಕ್ರಮಕ್ಕೆ ರೂ.10,000/-ಗಳ ಪ್ರೋತ್ಸಾಹಧನ ನೀಡಲಾಗುತ್ತದೆ.

**(ಎಫ್). ನಿರಾಮಯ ಆರೋಗ್ಯ ವಿಮಾ ಯೋಜನೆ :**

ಬುದ್ಧಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆ ಹೊಂದಿರುವ ಪ್ರತಿ ವ್ಯಕ್ತಿ ಹಾಗೂ ಮಗುವಿಗೆ ವರ್ಷಕ್ಕೆ ನಿರಾಮಯ ಆರೋಗ್ಯ ಯೋಜನೆಯಡಿ ಒಂದು ಬಾರಿ ಪ್ರೀಮಿಯಂ ಮೊತ್ತ ರೂ.250/-ಗಳನ್ನು ಭಾರತ ಸರ್ಕಾರದಿಂದ ಗುರುತಿಸಲ್ಪಟ್ಟ ಅಧಿಕೃತ ಸಂಸ್ಥೆಯಾದ ಅಂಗವಿಕಲರ ಪುನಶ್ಚೇತನ ಸಂಸ್ಥೆ (ರಿ) (ಎ.ಪಿ.ಡಿ) ಬೆಂಗಳೂರು ರವರಿಗೆ ಪಾವತಿಸಲಾಗುವುದು. ಪ್ರತಿ ವರ್ಷ ಯೋಜನೆಯಡಿ ಬರುವ ಫಲಾನುಭವಿಗಳು ರೂ.1.00 ಲಕ್ಷಗಳವರೆಗೆ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ. ಈ ಮೊತ್ತದಲ್ಲಿ ರೂ.60,000/-ಗಳವರೆಗೆ ಸರ್ಜರಿ ವೆಚ್ಚ ಉಳಿದ ರೂ.40,000/-ಗಳಲ್ಲಿ ವೈದ್ಯಕೀಯ ಖರ್ಚು ಥೆರಪಿ, ಪ್ರಯಾಣ ವೆಚ್ಚಗಳನ್ನು ಒಳಗೊಂಡಿರುತ್ತದೆ.

**(ಜಿ). ಸ್ಪರ್ಧಾ ಚೇತನ ಯೋಜನೆ:-**

ಈ ಯೋಜನೆಯಡಿ ವಿಶೇಷ ಸಾಮರ್ಥ್ಯ/ಭಿನ್ನ ಸಾಮರ್ಥ್ಯದ ವಿದ್ಯಾವಂತ ವ್ಯಕ್ತಿಗೆಗಳಿಗೆ ಐ.ಎ.ಎಸ್./ಕೆ.ಎ.ಎಸ್. ಹಾಗೂ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸರ್ಕಾರದ ಇತರೆ ಇಲಾಖೆಗಳಡಿ ಗುರುತಿಸಲ್ಪಟ್ಟ ಪೂರ್ವ ಪರೀಕ್ಷಾ ತರಬೇತಿ ಕೇಂದ್ರಗಳು ಹಾಗೂ ಈ ಇಲಾಖೆಯಿಂದ ಗುರುತಿಸಲ್ಪಟ್ಟ ತರಬೇತಿ ಕೇಂದ್ರಗಳ ಮೂಲಕ ತರಬೇತಿಯನ್ನು ಉಚಿತವಾಗಿ ನೀಡಲಾಗುತ್ತಿದೆ.

**(ಹೆಚ್). ವಿಕಲಚೇತನರಿಗೆ ವಿಶಿಷ್ಟ ಗುರುತಿನ ಚೀಟಿ** (ಗಓಖಕಿಗಇ ಆಖಖಂಃಖಖಖಖಜ ಖಆ)ನೀಡುವ ಯೋಜನೆಯು ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಯಾಗಿದೆ. ರಾಜ್ಯ ಸರ್ಕಾರದಿಂದ ನೇಮಿಸಲಾಗುವ ವೈದ್ಯಕೀಯ ಪ್ರಾಧಿಕಾರಗಳಿಂದ ದೃಢೀಕರಿಸಲಾಗುವ ವೈದ್ಯಕೀಯ ಪ್ರಮಾಣ ಪತ್ರದ ಸಮಗ್ರ ಮಾಹಿತಿಯುಳ್ಳ ಗಣಕೀಕೃತ ಗುರುತಿನ ಚೀಟಿಯನ್ನು ವಿಕಲಚೇತನ ವ್ಯಕ್ತಿಗಳಿಗೆ ನೀಡುವ ವ್ಯವಸ್ಥೆಯಾಗಿದ್ದು, ಇದರಲ್ಲಿ ವಿಕಲಚೇತನ ವ್ಯಕ್ತಿಯ ವಿವರಗಳು ಹಾಗೂ ಅವರಲ್ಲಿರುವ ವಿಕಲತೆಯ ವಿವರ ಮತ್ತು ಪ್ರಮಾಣವನ್ನು ನಮೂದಿಸಲಾಗಿರುತ್ತದೆ.

## ಹಿರಿಯ ನಾಗರಿಕರಿಗಾಗಿ ರಾಜ್ಯ ಸರ್ಕಾರವು ಜಾರಿಗೊಳಿಸುತ್ತಿರುವ ಯೋಜನೆಗಳು

### ಹಿರಿಯ ನಾಗರಿಕರ ವೃದ್ಧಾಶ್ರಮ:

ರಾಜ್ಯದ 30 ಜಿಲ್ಲೆಗಳಲ್ಲಿ ನಿರ್ಗತಿಕ ಹಿರಿಯ ನಾಗರಿಕರಿಗಾಗಿ ವೃದ್ಧಾಶ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದ್ದು, ಈ ವೃದ್ಧಾಶ್ರಮದಲ್ಲಿ 25 ನಿರ್ಗತಿಕ ಹಿರಿಯ ನಾಗರಿಕರನ್ನು ದಾಖಲಿಸಿಕೊಳ್ಳಲು ಅವಕಾಶವಿದ್ದು, ಒಂದು ವೃದ್ಧಾಶ್ರಮದ ನಿರ್ವಹಣೆಗಾಗಿ ವಾರ್ಷಿಕ ರೂ.8.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದ್ದು, ಇದರಲ್ಲಿ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ಯೋಜನಾ ವೆಚ್ಚದ ಶೇ.90ರಷ್ಟು ಅನುದಾನವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಲಾಗುತ್ತಿದ್ದು ಉಳಿದ ಶೇ.10ರಷ್ಟನ್ನು ಸಂಸ್ಥೆಯು ಭರಿಸಬೇಕಾಗುತ್ತದೆ. ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಮಂಜೂರು ಮಾಡಲಾಗುತ್ತಿದೆ.

ರಾಜ್ಯದ ಪ್ರತಿ ಕಂದಾಯ ಉಪ ವಿಭಾಗದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವೃದ್ಧಾಶ್ರಮಗಳನ್ನು ಪ್ರಾರಂಭಿಸಲು ಅವಕಾಶವಿದ್ದು, ಪ್ರಸ್ತುತ 8 ಕಂದಾಯ ಉಪ ವಿಭಾಗಕ್ಕೆ ವೃದ್ಧಾಶ್ರಮ ನಡೆಸಲು ಆಡಳಿತಾತ್ಮಕ ಮಂಜೂರಾತಿ ದೊರೆತಿರುತ್ತದೆ.

## ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು:

ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲರಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇಂತಹ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ರಾಜ್ಯದ 30 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಬೆಳಗಾವಿ ಮತ್ತು ಕಲಬುರಗಿ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ 28 ಜಿಲ್ಲೆಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ, ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಿಂದ ನಡೆಸಲಾಗುತ್ತಿದೆ.

## ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರಗಳು:

ರಾಜ್ಯದ 30 ಜಿಲ್ಲೆಗಳಿಗೆ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದ ಮಂಜೂರಾತಿ ದೊರೆತಿದ್ದು, ಪ್ರತಿ ಕೇಂದ್ರದಲ್ಲಿ ಸುಮಾರು 50-150 ಫಲಾನುಭವಿಗಳಿಗೆ ಅವಕಾಶ ಕಲ್ಪಿಸಿಕೊಡಲಾಗಿದ್ದು, ಸದರಿ ಯೋಜನೆಗೆ ಸರ್ಕಾರದಿಂದ ವಾರ್ಷಿಕ ರೂ.11.20 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗುತ್ತದೆ.

## ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು:

60 ವರ್ಷ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರ ಗುರುತಿನ ಚೀಟಿ ಪಡೆಯಲು ಸೇವಾ ಸಿಂಧು ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ದಿ:01.10.2018ರಿಂದ ಹಿರಿಯ ನಾಗರಿಕರು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ಪಡೆಯಬಹುದಾಗಿದೆ.

## ಹಿರಿಯ ನಾಗರಿಕರಿಗೆ ಬಸ್ ಪ್ರಮಾಣ ದರದಲ್ಲಿ ಶೇ.25 ರಷ್ಟು ರಿಯಾಯಿತಿ:

60 ವರ್ಷ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವೋಲ್ವೋ ಬಸ್ ಹೊರತುಪಡಿಸಿ ಎಲ್ಲಾ ಬಸ್‌ಗಳ ಪ್ರಯಾಣ ದರದಲ್ಲಿ ಶೇ.25ರಷ್ಟು ರಿಯಾಯಿತಿಯನ್ನು ನೀಡಲಾಗುತ್ತಿದೆ.

## ತಂದೆ ತಾಯಿಯರ ಮತ್ತು ಹಿರಿಯ ನಾಗರಿಕರ ಪಾಲನೆ, ಪೋಷಣೆ ಹಾಗೂ ಕಲ್ಯಾಣ ಅಧಿನಿಯಮ 2007

ಈ ಕಾಯ್ದೆಯಡಿ ಹಿರಿಯ ನಾಗರಿಕರ ಪಾಲನೆ, ಪೋಷಣೆ ಮತ್ತು ರಕ್ಷಣೆಗಾಗಿ ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ದೌರ್ಜನ್ಯ, ಶೋಷಣೆ, ಮೋಸ ವಂಚನೆಗೆ ಒಳಪಟ್ಟ ಹಿರಿಯ ನಾಗರಿಕರು ಕಾಯ್ದೆಯಡಿ ರಚಿತವಾಗಿರುವ ಆಯಾ ಉಪವಿಭಾಗದ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ನಿರ್ವಹಣಾ ನ್ಯಾಯ ಮಂಡಳಿಯಲ್ಲಿ ಪ್ರಕರಣ ದಾಖಲಿಸಿ ನ್ಯಾಯ ಪಡೆಯಬಹುದಾಗಿದೆ. ನಿರ್ವಹಣಾ ನ್ಯಾಯ ಮಂಡಳಿಯ ತೀರ್ಪು ತಮಗೆ ವಿರುದ್ಧವಾಗಿದ್ದಲ್ಲಿ ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಮೇಲ್ಮನವಿ ನ್ಯಾಯಮಂಡಳಿಯಲ್ಲಿ ನ್ಯಾಯವನ್ನು ಪಡೆಯಬಹುದಾಗಿದೆ.

## ವೃದ್ಧಾಪ್ಯ ವೇತನ

ವೃದ್ಧಾಪ್ಯ ವೇತನ ಯೋಜನೆಯಡಿ ವಾರ್ಷಿಕ ಆದಾಯವು ರೂ.32,000/- ಗಿಂತ ಕಡಿಮೆಯಿರುವ 60 ರಿಂದ 64 ವರ್ಷದೊಳಗಿನ ಹಿರಿಯ ನಾಗರಿಕರು ಮಾಹೆಯಾನ ರೂ.600/- ಗಳ ಪಿಂಚಣಿಯನ್ನು ಹಾಗೂ 65 ವರ್ಷಕ್ಕಿಂತ ಮೇಲ್ಪಟ್ಟ ವೃದ್ಧರು ಮಾಸಿಕ ರೂ.1200/-ಗಳ ಪಿಂಚಣಿಯನ್ನು ಸಾಮಾಜಿಕ ನ್ಯಾಯ ಮತ್ತು ಪಿಂಚಣಿ ಇಲಾಖೆಯ ತಾಲ್ಲೂಕು ತಹಸೀಲ್ದಾರ್ ಕಛೇರಿಯಿಂದ ಪಡೆಯಬಹುದಾಗಿರುತ್ತದೆ.

## ಕೇಂದ್ರ ಸರ್ಕಾರದ ಅನುದಾನಿತ ಯೋಜನೆಗಳು

**ಇಂಟಿಗ್ರೇಟೆಡ್ ಪ್ರೋಗ್ರಾಂ ಫಾರ್ ಓಲ್ಡರ್ ಪರ್ಸನ್ಸ್:**

ಕೇಂದ್ರ ಸರ್ಕಾರದ ಯೋಜನೆಯು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಹಿರಿಯ ನಾಗರಿಕರಿಗಾಗಿ ಈ ಕೆಳಕಂಡ ಯೋಜನೆಗಳನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

| | | |
|---|---|---|
| ಅ | ವೃದ್ಧಾಶ್ರಮಗಳು | 49 |
| ಆ | ಡಿಮೆನ್ಷಿಯಾ ಕೇರ್ ಸೆಂಟರ್ | 02 |
| ಇ | ಮೊಬೈಲ್ ಮೆಡಿಕೇರ್ ಯೂನಿಟ್ | 01 |
| ಈ | ಫಿಜಿಯೋ ಥೆರಪಿ ಕ್ಲಿನಿಕ್ | – |

**ರಾಷ್ಟ್ರೀಯ ಹಿರಿಯ ನಾಗರಿಕರ ಸಹಾಯವಾಣಿ**

2021–22ನೇ ಸಾಲಿನಿಂದ ಕೇಂದ್ರ ಸರ್ಕಾರದ ಯೋಜನೆಯಡಿ ಉನ್ನತ ತಾಂತ್ರಿಕತೆಯನ್ನು ಹೊಂದಿರುವ ರಾಷ್ಟ್ರೀಯ ಹಿರಿಯ ನಾಗರಿಕರ ಸಹಾಯವಾಣಿಯನ್ನು ಬೆಂಗಳೂರಿನಲ್ಲಿ ನೈಟಿಂಗೇಲ್ ಮೆಡಿಕಲ್ ಟ್ರಸ್ಟ್ ಸಂಸ್ಥೆಯ ಮುಖಾಂತರ ಜಾರಿಗೊಳಿಸಲಾಗುತ್ತಿದೆ. ಟೋಲ್ ಫ್ರೀ ಸಹಾಯವಾಣಿಯ ಸಂಖ್ಯೆ: 14567 ಆಗಿರುತ್ತದೆ.

# ಮಕ್ಕಳ ರಕ್ಷಣಾ ನಿರ್ದೇಶನಾಲಯ

ಮಕ್ಕಳ ರಕ್ಷಣಾ ನಿರ್ದೇಶನಾಲಯದಡಿ 2021–22 ನೇ ಸಾಲಿನಲ್ಲಿ ಈ ಮುಂದಿನ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗತ್ತಿದೆ.

1) ಪ್ರಾಯೋಜಕತ್ವ ಕಾರ್ಯಕ್ರಮ.
2) ವಿಶೇಷ ಪಾಲನಾ ಯೋಜನೆ.
3) ಮುಖ್ಯಮಂತ್ರಿ ಬಾಲಸೇವಾ ಯೋಜನೆ.
4) ಬಾಲಹಿತೈಷಿ ಯೋಜನೆ.
5) ಕೇಂದ್ರ ಸರ್ಕಾರದ "PM CARES for Children" ಯೋಜನೆ.
6) ಉಪಕಾರ್.

*****

# ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ

**1.ಉದ್ಯೋಗಿನಿ ಯೋಜನೆ :-**

ಮಹಿಳೆಯರು ಆದಾಯಉತ್ಪನ್ನಕರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಸ್ವಯಂ ಉದ್ಯೋಗಿಗಳಾಗಲು ಬ್ಯಾಂಕ್ ಮೂಲಕ ಸಾಲ ಮತ್ತು ನಿಗಮದ ಮೂಲಕ ಸಹಾಯಧನವನ್ನು ನೀಡಲಾಗುತ್ತದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಸಾಲದಘಟಕ ವೆಚ್ಚ ಕನಿಷ್ಟ ರೂ.1.00 ಲಕ್ಷದಿಂದಗರಿಷ್ಟ ರೂ.3.00 ಲಕ್ಷಗಳು, ಸಹಾಯಧನದ ಮೊತ್ತ 50 ರಷ್ಟು, ಗರಿಷ್ಟ ರೂ.1,50,000/-. ಕುಟುಂಬದ ವಾರ್ಷಿಕಆದಾಯದಗರಿಷ್ಟ ಮಿತಿ ರೂ.2.00 ಲಕ್ಷಗಳು.

ಸಾಮಾನ್ಯ ವರ್ಗ ಮತ್ತು ವಿಶೇಷ ವರ್ಗದ ಫಲಾನುಭವಿಗಳಿಗೆ ಸಾಲದಘಟಕ ವೆಚ್ಚ ರೂ.1.00ಲಕ್ಷ ರೂ ಗಳಿಂದ ರೂ. 3.00 ಲಕ್ಷಗಳು, ಸಹಾಯಧನದ ಮೊತ್ತ ಶೇ.30 ರಷ್ಟುಗರಿಷ್ಟ ರೂ.90,000/- ಕುಟುಂಬದ ವಾರ್ಷಿಕಆದಾಯದಗರಿಷ್ಟ ಮಿತಿ ರೂ.1.50 ಲಕ್ಷಗಳು. ಎಲ್ಲಾ ವರ್ಗದ ಮಹಿಳೆಯರಿಗೆ ವಯೋಮಿತಿ 18 ರಿಂದ 55 ವರ್ಷಗಳು.

**2.ಕಿರುಸಾಲ ಯೋಜನೆ:-**

ಈ ಯೋಜನೆಯಡಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿಇಲಾಖೆಯಲ್ಲಿ ಸ್ತ್ರೀಶಕ್ತಿ ಯೋಜನೆಯಡಿರಚನೆಗೊಂಡ ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘಗಳು ಆರ್ಥಿಕವಾಗಿ ಸಬಲರಾಗಲು ಪ್ರತಿ ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘಕ್ಕೆ ನಿಗಮದ ವತಿಯಿಂದ ಬಡ್ಡಿರಹಿತ ಸಾಲ ಒದಗಿಸುವುದು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸ್ತ್ರೀ ಶಕ್ತಿ ಸಂಘಕ್ಕೆ ರೂ.1.00 ಲಕ್ಷದಿಂದರೂ. 3.00 ಲಕ್ಷಗಳವರೆಗೆ ಮತ್ತುಇತರೆ ವರ್ಗದ ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘಗಳಿಗೆ ರೂ.1.00 ಲಕ್ಷದಿಂದರೂ. 2.00 ಲಕ್ಷಗಳವರೆಗೆ ಬಡ್ಡಿರಹಿತ ಸಾಲ ಒದಗಿಸಲಾಗುತ್ತದೆ.

**3.ಲಿಂಗತ್ವಅಲ್ಪಸಂಖ್ಯಾತರ ಪುನರ್ವಸತಿಯೋಜನೆ:-**

ಲಿಂಗತ್ವಅಲ್ಪಸಂಖ್ಯಾತರನ್ನುಆರ್ಥಿಕವಾಗಿ ಸಬಲೀಕರಣಗೊಳಿಸಲು ಆದಾಯೋತ್ಪನ್ನಕರಚಟುವಟಿಕೆ ಕೈಗೊಳ್ಳುವ ಉದ್ದೇಶಕ್ಕಾಗಿ ನಿಗಮದಿಂದ ನೇರವಾಗಿ ಪ್ರೋತ್ಸಾಹಧನ ಮೊತ್ತ ರೂ.30,000/-ಗಳ ಆರ್ಥಿಕ ಸೌಲಭ್ಯವನ್ನುಉದ್ಯಮ ಶೀಲತಾ ಅಭಿವೃದ್ಧಿತರಬೇತಿಯೊಂದಿಗೆ ನೀಡಲಾಗುತ್ತದೆ.

**4.ಚೇತನ ಯೋಜನೆ:-**

ದಮನಿತ ಮಹಿಳೆಯರು ಆದಾಯೋತ್ಪನ್ನಕರಚಟುವಟಿಕೆ ಕೈಗೊಳ್ಳಲು ಅನುವಾಗುವಂತೆ ನಿಗಮದಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದದಮನಿತ ಮಹಿಳೆಯರಿಗೆ ನಿಗಮದಿಂದ ನೇರವಾಗಿ ಪ್ರೋತ್ಸಾಹಧನ ಮೊತ್ತ ರೂ.30,000/-ಗಳನ್ನು ಉದ್ಯಮಶೀಲತಾ ಅಭಿವೃದ್ಧಿತರಬೇತಿಯೊಂದಿಗೆ ನೀಡಲಾಗುತ್ತದೆ.

**5.ಧನಶ್ರೀ ಯೋಜನೆ:-**

18 ರಿಂದ 60 ವಯೋಮಾನದ ಹೆಚ್.ಐ.ವಿ ಸೋಂಕಿತ ಮಹಿಳೆಯರಿಗೆ ಸ್ವಯಂಉದ್ಯೋಗ ಕೈಗೊಳ್ಳಲು ನಿಗಮದಿಂದ ನೇರವಾಗಿ ಪ್ರೋತ್ಸಾಹಧನ ಮೊತ್ತ ರೂ.30,000/-ಗಳಆರ್ಥಿಕ ಸೌಲಭ್ಯವನ್ನು ಉದ್ಯಮಶೀಲತಾ ಅಭಿವೃದ್ಧಿತರಬೇತಿಯೊಂದಿಗೆಒದಗಿಸಲಾಗುತ್ತಿದೆ.

**6.ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿಯೋಜನೆ :-**

ಆರ್ಥಿಕವಾಗಿ ಮಾಜಿ ದೇವದಾಸಿಯರನ್ನು ಸಬಲೀಕರಣಗೊಳಿಸಲು ಆದಾಯೋತ್ಪನ್ನಕರಚಟುವಟಿಕೆ ಕೈಗೊಳ್ಳುವ ಉದ್ದೇಶಕ್ಕಾಗಿ ನಿಗಮದಿಂದನೇರವಾಗಿ ಪ್ರೋತ್ಸಾಹಧನ ಮೊತ್ತ ರೂ.30,000/-ಗಳ ಆರ್ಥಿಕ ಸೌಲಭ್ಯವನ್ನುಇ.ಡಿ.ಪಿ ತರಬೇತಿಯೊಂದಿಗೆ ನೀಡಲಾಗುತ್ತಿದೆ ಹಾಗೂ ದೇವದಾಸಿ ಪದ್ಧತಿಯ ನಿರ್ಮೂಲನೆಗಾಗಿ ಅರಿವು ಮೂಡಿಸುವ ಕಾರ್ಯಕ್ರಮಗಳು, ಕಾನೂನು ಶಿಬಿರ ಹಾಗೂ ಮಾಜಿ ದೇವದಾಸಿ ಮಹಿಳೆಯರಿಗಾಗಿ ಆರೋಗ್ಯ ಶಿಬಿರಗಳನ್ನು ಕೈಗೊಳ್ಳಲಾಗುತ್ತಿದೆ.

**7.ಮಾಜಿ ದೇವದಾಸಿಯರಿಗೆ ಮಾಸಾಶನ:-**

45 ವರ್ಷ ಮೀರಿದ ಮಾಜಿ ದೇವದಾಸಿಯರಿಗೆ ಕನಿಷ್ಠ ಜೀವನ ನಡೆಸಲುಸಹಕಾರಿಯಾಗುವಂತೆ, ರೂ. 1500/-ಗಳ ಮಾಸಾಶನವನ್ನು ನೀಡಲಾಗುತ್ತಿದೆ.

**8.ಮಾಜಿ ದೇವದಾಸಿ ಮಹಿಳೆಯರಿಗೆ ವಸತಿ ಯೋಜನೆ:-**

ಕರ್ನಾಟಕ ರಾಜ್ಯದ 14 ಜಿಲ್ಲೆಗಳಲ್ಲಿ ನಿವೇಶನ ಹೊಂದಿರುವ ವಸತಿ ರಹಿತ ಮಾಜಿ ದೇವದಾಸಿ ಮಹಿಳೆಯರಿಗೆ ವಸತಿ ಯೋಜನೆಯನ್ನು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ.

**9.ಮಹಿಳಾ ತರಬೇತಿ ಯೋಜನೆ:-**

ಆರ್ಥಿಕವಾಗಿ ಹಿಂದುಳಿದ ಮಹಿಳೆಯರು, ದಮನಿತ ಮಹಿಳೆಯರು ಮತ್ತು ವಿಶೇಷ ವರ್ಗದವರಿಗೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಮಹಿಳೆಯರಿಗೆ ಕೌಶಲ್ಯತರಬೇತಿ  ನೀಡಿ, ಅವರಲ್ಲಿ ಉದ್ಯಮಶೀಲತೆಯನ್ನು ಬೆಳೆಸುವ ಗುರಿಯನ್ನು ಹೊಂದಲಾಗಿದೆ.

**10.ಬಡ್ಡಿ ಸಹಾಯಧನಯೋಜನೆ (ಕರ್ನಾಟಕ ರಾಜ್ಯ ಆರ್ಥಿಕ ಹಣಕಾಸು ನಿಗಮ ಮೂಲಕ) :-**

ಕರ್ನಾಟಕ ರಾಜ್ಯ ಹಣಕಾಸು ನಿಗಮದ ಮೂಲಕ ಕನಿಷ್ಟ ರೂ.5.00 ಲಕ್ಷದಿಂದ ರೂ.200.00 ಲಕ್ಷಗಳ ಸಾಲವನ್ನು ಹಾಗೂ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಶೇ. 10ರಷ್ಟು ಬಡ್ಡಿ ಸಹಾಯಧನವನ್ನು ಸಣ್ಣ/ ಮದ್ಯಮ ಕೈಗಾರಿಕೆ ಹಾಗೂ ಸೇವಾ ಘಟಕಗಳನ್ನು ಪ್ರಾರಂಭಿಸಿ ಉದ್ಯೋಗ ಚಟುವಟಿಕೆಗಳಲ್ಲಿ ತೊಡಗುವ ಮಹಿಳಾ ಉದ್ದಿಮೆದಾರರನ್ನು ಪ್ರೋತ್ಸಾಹಿಸುವ ಸಲುವಾಗಿ ನೀಡಲಾಗುತ್ತಿದೆ.

**11.ಸಮೃದ್ಧಿ ಯೋಜನೆ**

ಬೀದಿಬದಿಯಲ್ಲಿ ಸಣ್ಣ ವ್ಯಾಪಾರ ಮಾಡುತ್ತಿರುವ ಬಡತನರೇಖೆಗಿಂತ ಕೆಳಗಿರುವ 18 ರಿಂದ 60 ವರ್ಷ ವಯೋಮಾನದ ಮಹಿಳೆಯರಿಗೆ ತಲಾ ರೂ.10,000/- ಗಳಂತೆ ಪ್ರೋತ್ಸಾಹಧನ ನೀಡಲಾಗುತ್ತದೆ.

**12.ಇಂದಿರಾ ಯೋಜನೆ**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿಇಲಾಖೆಯಲ್ಲಿಕಾರ್ಯ ನಿರ್ವಹಿಸುತ್ತಿರುವ ಮೇಲ್ವಿಚಾರಕಿಯರಿಗೆ ದ್ವಿ-ಚಕ್ರ ವಾಹನ ಖರೀದಿಸಲು ಕರ್ನಾಟಕರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ರೂ.50,000/-ಗಳ ಬಡ್ಡಿರಹಿತ ಸಾಲವನ್ನು ನೀಡಲಾಗುವುದು.

*******

# ಅನುಬಂಧ-3

## ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ

| ಕ್ರಸಂ | ಹುದ್ದೆಯ ಹೆಸರು | ವೇತನ ಶ್ರೇಣಿ |
|---|---|---|
| | ಪ್ರಧಾನ ಕಛೇರಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳು | |
| 01 | ನಿರ್ದೇಶಕರು | |
| 02 | ಜಂಟಿ ನಿರ್ದೇಶಕರು | 74400-109600 |
| 03 | ಜಂಟಿ ನಿಯಂತ್ರಕರು | 74400-109600 |
| 04 | ಉಪ ನಿರ್ದೇಶಕರು | 67550-104600 |
| 05 | ಹಿರಿಯ ಸಹಾಯಕ ನಿರ್ದೇಶಕರು | 61150-102100 |
| 06 | ಸಹಾಯಕ ನಿರ್ದೇಶಕರು | 61150-102100 |
| 07 | ಲೆಕ್ಕಾಧಿಕಾರಿಗಳು | 52650-97100 |
| 08 | ಅಧೀಕ್ಷಕರು ದರ್ಜೆ-1 | 43100-83900 |
| 09 | ಲೆಕ್ಕಾಧೀಕ್ಷಕರು | 40900-78200 |
| 10 | ಅಧೀಕ್ಷಕರು ದರ್ಜೆ-2 | 37900-70850 |
| 11 | ಪ್ರಥಮ ದರ್ಜೆ ಸಹಾಯಕರು | 27650-52650 |
| 12 | ದ್ವಿತೀಯ ದರ್ಜೆ ಸಹಾಯಕರು | 21400-42000 |
| 13 | ಶೀಘ್ರಲಿಪಿಗಾರರು | 27650-52650 |
| 14 | ಹಿರಿಯ ಬೆರಳಚ್ಚುಗಾರರು | 27650-52650 |
| 15 | ಹಿರಿಯ ವಾಹನ ಚಾಲಕರು | 27650-52650 |
| 16 | ವಾಹನ ಚಾಲಕರು | 21400-42000 |
| 17 | ಬೆರಳಚ್ಚುಗಾರರು | 21400-42000 |
| 18 | ಗ್ರೂಪ್-ಡಿ | 17000-28950 |
| | ಜಿಲ್ಲಾ ಮಟ್ಟದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳು | |
| 01 | ಉಪ ನಿರ್ದೇಶಕರು | 67550-104600 |
| 02 | ನಿರೂಪಣಾಧಿಕಾರಿಗಳು | 61150-102100 |
| 03 | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ | 61150-102100 |
| 04 | ಅಧೀಕ್ಷಕರು ದರ್ಜೆ-2 | 37900-70850 |
| 05 | ಅಧೀಕ್ಷಕರು ದರ್ಜೆ-2 (ಖಓಕ ನಿರೀಕ್ಷಕರು) | 37900-70850 |
| 06 | ಪ್ರಥಮ ದರ್ಜೆ ಸಹಾಯಕರು | 27650-52650 |
| 07 | ದ್ವಿತೀಯ ದರ್ಜೆ ಸಹಾಯಕರು | 21400-42000 |
| 08 | ಬೆರಳಚ್ಚುಗಾರರು | 21400-42000 |
| 09 | ವಾಹನ ಚಾಲಕರು | 21400-42000 |
| 10 | ಜವಾನರು | 17000-28950 |
| | ಪರಿವೀಕ್ಷಣಾ ಅಧಿನಿಯಮ ಕಛೇರಿ | |
| 01 | ಪರಿವೀಕ್ಷಣಾಧಿಕಾರಿಗಳು | 37900-70850 |
| 02 | ಜವಾನರು | 17000-28950 |
| | ತಾಲ್ಲೂಕು ಮಟ್ಟದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳು | |
| 01 | ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು | 52650-97100 |
| 02 | ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು | 43100-83900 |
| 03 | ಹಿರಿಯ ಮೇಲ್ವಿಚಾರಕಿಯರು | 37900-70850 |
| 04 | ಮೇಲ್ವಿಚಾರಕಿಯರು | 27650-52650 |
| 05 | ಲೆಕ್ಕಿಗರು | 27650-52650 |

| | | |
|---|---|---|
| 06 | ದ್ವಿತೀಯ ದರ್ಜೆ ಸಹಾಯಕರು | 21400–42000 |
| 07 | ಬೆರಳಚ್ಚುಗಾರರು | 21400–42000 |
| 08 | ವಾಹನ ಚಾಲಕರು | 21400–42000 |
| 09 | ಜವಾನರು | 17000–28950 |
| | **ತಾಲ್ಲೂಕು ಮಟ್ಟದಲ್ಲಿ ಗೌರವಧನದ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳು** | |
| 01 | ಅಂಗನವಾಡಿ ಕಾರ್ಯಕರ್ತೆಯರು | 10,000/– |
| 02 | ಮಿನಿ ಅಂಗನವಾಡಿ ಕೇಂದ್ರದ ಕಾರ್ಯಕರ್ತೆಯರು | 6,250/– |
| 03 | ಅಂಗನವಾಡಿ ಸಹಾಯಕಿಯರು | 5,250/– |

******

| ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ | | |
|---|---|---|
| ಕ್ರ. ಸಂ. | ಜಿಲ್ಲೆಗಳ ಹೆಸರು | ಹುದ್ದೆಗಳ ಪದನಾಮ |
| 1 | ನಿರ್ದೇಶನಾಲಯ | ನಿರ್ದೇಶಕರು |
| | | ಜಂಟಿನಿರ್ದೇಶಕರು |
| | | ಉಪನಿರ್ದೇಶಕರು |
| | | ಅಧೀಕ್ಷಕರು |
| | | ಶೀಘ್ರಲಿಪಿಗಾರರು |
| | | ಪ್ರಥಮ ದರ್ಜೆ ಸಹಾಯಕರು |
| | | ದ್ವಿತೀಯ ದರ್ಜೆ ಸಹಾಯಕರು |
| | | ಬೆರಳಚ್ಚುಗಾರರು |
| | | ವಾಹನ ಚಾಲಕರು |
| | | ಗ್ರೂಪ್ ಡಿ |
| 2 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ,<br>ಬೆಂಗಳೂರು ನಗರ ಜಿಲ್ಲೆ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಪ್ರ.ದ.ಸ. |
| | | ಗ್ರೂಪ್ ಡಿ |
| 3 | ಮಂದಮತಿ ಮಹಿಳೆಯರ ಅನುಪಾಲನಾ ಗೃಹ, ಬೆಂಗಳೂರು | ಅಧೀಕ್ಷಕರು |
| | | ಪ್ರ.ದ.ಸ. |
| | | ಪದವಿ ಪೂರ್ವ ಶಿಕ್ಷಕರು |
| | | ಎ.ಎನ್.ಎಂ. |
| | | ಗೃಹಪಾಲಕರು |
| | | ಗ್ರೂಪ್ ಡಿ |
| | | ಅಡುಗೆಯವರು |
| | | ಸೈಕಲ್ ಸವಾರ |
| | | ಕಛೇರಿ ಸೇವಕರು |
| | | ಸ್ವಚ್ಚತಾಗಾರರು |
| | | ದೋಬಿ |
| 4 | ಸಮಾಜ ಸೇವಾ ಸಂಕೀರ್ಣ. ಬೆಂಗಳೂರು | ಪತ್ರಾಂಕಿತ ಅಧೀಕ್ಷಕರು |
| | | ಫಿಜಿಯೋ ಥೆರಪಿಸ್ಟ್ |
| | | ದ್ವಿ.ದ.ಸ. |
| | | ಎ.ಎನ್.ಎಂ. |

| | | |
|---|---|---|
| | | ಗ್ರೂಪ್ ಡಿ |
| | | ಅಡುಗೆಯವರು |
| | | ಸೈಕಲ್ ಸವಾರರು |
| | | ಸೇವಕರು |
| | | ಆಯಾ |
| | | ಸೈಕೋ ಥೆರಪಿಸ್ಟ್ |
| | | ದೋಬಿ |
| 5 | ಅಂಗವಿಕಲ ನೌಕರರ ಹಾಗೂ ತರಬೇತಿದಾರರ (ಪುರುಷರು) ವಸತಿ ನಿಲಯ, ಬೆಂಗಳೂರು | ಗ್ರೂಪ್ ಡಿ |
| | | ಸ್ವಚ್ಛತಾಗಾರರು |
| | | ಅಡುಗೆಯವರು |
| | | ರಾತ್ರಿ ಕಾವಲುಗಾರರು |
| | | ಆಯಾ |
| 6 | ಅಂಗವಿಕಲ ನೌಕರರ ಹಾಗೂ ತರಬೇತಿದಾರರ (ಮಹಿಳೆಯರು) ವಸತಿ ನಿಲಯ, ಬೆಂಗಳೂರು | ಗ್ರೂಪ್ ಡಿ |
| 7 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ,<br>ಬೆಂಗಳೂರು ಗ್ರಾಮಾಂತರ ಜಿಲ್ಲೆ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಗ್ರೂಪ್ ಡಿ |
| 8 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಬೆಳಗಾವಿ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಬೆರಳಚ್ಚುಗಾರರು |
| | | ಗ್ರೂಪ್ ಡಿ |
| 9 | ಕಿವುಡು ಮಕ್ಕಳ ಸರ್ಕಾರಿ ಶಾಲೆ, ಬೆಳಗಾವಿ | ಪದವೀಧರ ಸಹಾಯಕ ಶಿಕ್ಷಕರು |
| | | ಪದವಿ ಪೂರ್ವ ಶಿಕ್ಷಕರು |
| | | ಜವಾನರು |
| | | ಅಡುಗೆಯವರು |
| | | ಹಾಸ್ಟಲ್ ಸಹಾಯಕರು |
| | | ರಾತ್ರಿ ಕಾವಲುಗಾರರು |

| | | |
|---|---|---|
| 10 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಬಳ್ಳಾರಿ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಬೆರಳಚ್ಚುಗಾರರು |
| | | ಗ್ರೂಪ್ ಡಿ |
| 11 | ಕಿವುಡು ಮಕ್ಕಳ ಸರ್ಕಾರಿ ಶಾಲೆ, ಬಳ್ಳಾರಿ | ಪದವೀಧರ ಸಹಾಯಕ ಶಿಕ್ಷಕರು |
| | | ಪದವಿ ಪೂರ್ವ ಶಿಕ್ಷಕರು |
| | | ರಾತ್ರಿ ಕಾವಲುಗಾರರು |
| | | ಜವಾನರು |
| | | ಹಾಸ್ಟಲ್ ಸಹಾಯಕರು |
| | | ಅಡುಗೆ ಪರಿಚಾರಕರು |
| 12 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಬೀದರ್ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಬೆರಳಚ್ಚುಗಾರರು |
| | | ಗ್ರೂಪ್ ಡಿ |
| 13 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಬಿಜಾಪುರ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಬೆರಳಚ್ಚುಗಾರರು |
| | | ಗ್ರೂಪ್ ಡಿ |
| 14 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಬಾಗಲಕೋಟೆ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಬೆರಳಚ್ಚುಗಾರರು |
| | | ಗ್ರೂಪ್ ಡಿ |
| 15 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಚಿತ್ರದುರ್ಗ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಗ್ರೂಪ್ ಡಿ |
| 16 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಚಾಮರಾಜನಗರ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ದ್ವಿ.ದ.ಸ. |
| | | ಬೆರಳಚ್ಚುಗಾರರು |
| | | ಗ್ರೂಪ್ ಡಿ |

| | | |
|---|---|---|
| 17 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ,<br>ಧಾರವಾಡ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ದ್ವಿ.ದ.ಸ. |
| | | ಬೆರಳಚ್ಚುಗಾರರು |
| | | ಗ್ರೂಪ್ ಡಿ |
| 18 | ಅಂಧ ಮಕ್ಕಳ ಸರ್ಕಾರಿ ಶಾಲೆ, ಹುಬ್ಬಳ್ಳಿ | ಪದವಿ ಪೂರ್ವ ಶಿಕ್ಷಕರು |
| | | ದ್ವಿ.ದ.ಸ. |
| | | ವಾರ್ಡನ್ |
| | | ಸಂಗೀತ ಶಿಕ್ಷಕರು ದರ್ಜೆ–2 |
| | | ಗ್ರೂಪ್ ಡಿ |
| | | ಅಡುಗೆಯವರು |
| | | ಜವಾನರು |
| | | ರಾತ್ರಿ ಕಾವಲುಗಾರರು |
| | | ಸ್ವಚ್ಛತಾಗಾರರು |
| 19 | ಮಂದಮತಿ ಮಹಿಳೆಯರ ಅನುಪಾಲನಾ ಗೃಹ, ಹುಬ್ಬಳ್ಳಿ | ಫಿಜಿಯೋ ಥೆರಪಿಸ್ಟ್ |
| | | ಪದವಿಪೂರ್ವ ಶಿಕ್ಷಕರು |
| | | ಎ.ಎನ್.ಎಂ. |
| | | ಸ್ಟಾಫ್ ನರ್ಸ್ |
| | | ಆಯಾ |
| | | ಸ್ವಚ್ಛತಾಗಾರರು |
| | | ಕಛೇರಿ ಸೇವಕರು |
| | | ರಕ್ಷಕರು |
| | | ಸಂದರ್ಶಕವೈದ್ಯಾಧಿಕಾರಿಗಳು |
| | | ಅಡುಗೆಯವರು |
| 20 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ,<br>ದಾವಣಗೆರೆ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಗ್ರೂಪ್ ಡಿ |
| 21 | ಅಂಧ ಮಕ್ಕಳ ಸರ್ಕಾರಿ ಶಾಲೆ, ದಾವಣಗೆರೆ | ಪದವೀಧರ ಶಿಕ್ಷಕರು |
| | | ಪದವಿ ಪೂರ್ವ ಶಿಕ್ಷಕರು |
| | | ಸಂಗೀತ ಶಿಕ್ಷಕರು ದರ್ಜೆ–2 |
| | | ಸಂಗೀತ ಶಿಕ್ಷಕರು ದರ್ಜೆ–3 |
| | | ದೈಹಿಕ ಶಿಕ್ಷಕರು |
| | | ಗ್ರೂಪ್ ಡಿ |
| | | ಅಡುಗೆ ಪರಿಚಾರಕರು |

| | | |
|---|---|---|
| | | ರಾತ್ರಿ ಕಾವಲುಗಾರರು |
| | | ಹಾಸ್ಟಲ್ ಸೇವಕರು |
| | | ಜವಾನರು |
| 21 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಗುಲ್ಬರ್ಗಾ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಬೆರಳಚ್ಚುಗಾರರು |
| | | ಗ್ರೂಪ್ ಡಿ |
| 22 | ಅಂಧ ಮಕ್ಕಳ ಸರ್ಕಾರಿ ಶಾಲೆ, ಗುಲ್ಬರ್ಗ | ಪದವೀಧರ ಶಿಕ್ಷಕರು |
| | | ಪದವಿಪೂರ್ವ ಶಿಕ್ಷಕರು |
| | | ಸಂಗೀತ ಶಿಕ್ಷಕರು ದರ್ಜೆ–2 |
| | | ಸಂಗೀತ ಶಿಕ್ಷಕರು ದರ್ಜೆ–3 |
| | | ದೈಹಿಕ ಶಿಕ್ಷಕರು |
| | | ದ್ವಿ.ದ.ಸ. |
| | | ಅಡುಗೆಯವರು |
| | | ಅಟೆಂಡರ್ |
| | | ಗ್ರೂಪ್ ಡಿ |
| | | ರಾತ್ರಿ ಕಾವಲುಗಾರರು |
| | | ಮೇಡ್ ಸರ್ವೆಂಟ್ |
| 23 | ಕಿವುಡು ಮಕ್ಕಳ ಸರ್ಕಾರಿ ಶಾಲೆ, ಗುಲ್ಬರ್ಗಾ | ಪದವೀಧರ ಶಿಕ್ಷಕರು |
| | | ಪದವಿ ಪೂರ್ವ ಶಿಕ್ಷಕರು |
| | | ಪ್ರ.ದ.ಸ. |
| | | ವಾರ್ಡನ್ |
| | | ಅಡುಗೆ ಸಂಚಾಲಕರು |
| | | ರಾತ್ರಿ ಕಾವಲುಗಾರರು |
| | | ಜವಾನರು |
| | | ಮೇಡ್ ಸರ್ವೆಂಟ್ |
| 24 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಗದಗ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಗ್ರೂಪ್ ಡಿ |

| | | |
|---|---|---|
| 25 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಹಾಸನ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಗ್ರೂಪ್ ಡಿ |
| 26 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಹಾವೇರಿ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಗ್ರೂಪ್ ಡಿ |
| 27 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಕೊಡಗು | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಗ್ರೂಪ್ ಡಿ |
| 28 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಕೋಲಾರ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಗ್ರೂಪ್ ಡಿ |
| 29 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಕೊಪ್ಪಳ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಬೆರಳಚ್ಚುಗಾರರು |
| | | ಗ್ರೂಪ್ ಡಿ |
| 30 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಮೈಸೂರು | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಗ್ರೂಪ್ ಡಿ |
| 31 | ಅಂಧ ಮಕ್ಕಳ ಸರ್ಕಾರಿ ಶಾಲೆ, ಮೈಸೂರು | ಪದವೀಧರ ಶಿಕ್ಷಕರು |
| | | ಪದವಿ ಪೂರ್ವ ಶಿಕ್ಷಕರು |
| | | ದೈಹಿಕ ಶಿಕ್ಷಕರು |
| | | ವೃತ್ತಿ ಬೋದಕರು |
| | | ಸಂಗೀತ ಶಿಕ್ಷಕರು ದರ್ಜೆ–3 |
| | | ದ್ವಿ.ದ.ಸ. |
| | | ವಾಡನ್ |
| | | ಅಟೆಂಡರ್ |
| | | ಜವಾನರು |
| | | ಸ್ವಚ್ಛತಾಗಾರರು |
| | | ಹಾಸ್ಟಲ್ ಸರ್ವೆಂಟ್ |
| | | ಆಯಾ |
| | | ಅಟೆಂಡರ್ |

| | | |
|---|---|---|
| | | |
| 32 | ಕಿವುಡು ಮಕ್ಕಳ ಸರ್ಕಾರಿ ಶಾಲೆ, ಮೈಸೂರು | ಪದವೀಧರ ಶಿಕ್ಷಕರು |
| | | ಪದವಿ ಪೂರ್ವ ಶಿಕ್ಷಕರು |
| | | ಪ್ರ.ದ.ಸ. |
| | | ದ್ವಿ.ದ.ಸ. |
| | | ಜವಾನರು |
| | | ಅಡಿಗೆ ಪರಿಚಾರಕರು |
| | | ಆಯಾ |
| | | ರಾತ್ರಿ ಕಾವಲುಗಾರರು |
| | | ಅಟೆಂಡರ್ |
| 33 | ಸರ್ಕಾರಿ ಬ್ರೈಲ್ ಮುದ್ರಣಾಲಯ, ಮೈಸೂರು | ಕಾಪಿ ಎಡಿಟರ್ |
| | | ಸ್ಟೀರಿಯೋ ಟೈಪ್ ಆಪರೇಟರ್ |
| | | ಪ್ರೂಫ್ ಪ್ರೆಸ್‌ಮೆನ್, ಪ್ರೂಫ್ ರೀಡರ್/ ಕಾಪಿ ಹೋಲ್ಡರ್ |
| | | ದ್ವಿ.ದ.ಸ. |
| | | ಅಟೆಂಡರ್ |
| | | ಗ್ರೂಪ್ ಡಿ |
| 34 | ಅಂಧ ಮತ್ತು ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ತರಬೇತಿ ಕೇಂದ್ರ, ಮೈಸೂರು | ಉಪನಿರ್ದೇಶಕರು |
| | | ಗ್ರೂಪ್ ಡಿ |
| 35 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಮಂಡ್ಯ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಗ್ರೂಪ್ ಡಿ |
| 36 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ರಾಯಚೂರು | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಗ್ರೂಪ್ ಡಿ |
| 37 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಶಿವಮೊಗ್ಗ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಗ್ರೂಪ್ ಡಿ |

| | | |
|---|---|---|
| 38 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ತುಮಕೂರು | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಗ್ರೂಪ್ ಡಿ |
| 39 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ರಾಮನಗರ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಗ್ರೂಪ್ ಡಿ |
| 40 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಚಿಕ್ಕಬಳ್ಳಾಪುರ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಗ್ರೂಪ್ ಡಿ |
| 41 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ, ಯಾದಗಿರಿ | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು |
| | | ಯೋಜನಾ ಸಹಾಯಕರು |
| | | ಬೆರಳಚ್ಚುಗಾರರು |
| | | ಗ್ರೂಪ್ ಡಿ |

**ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಲ್ಲಿನ ಹುದ್ದೆವಾರು ವೇತನ ಶ್ರೇಣಿಗಳ ವಿವರ**

| ಕ್ರಮ ಸಂಖ್ಯೆ | ವೃಂದದ ಹೆಸರು | ವೇತನ ಶ್ರೇಣಿ |
|---|---|---|
| 01 | ನಿರ್ದೇಶಕರು | |
| 02 | ಜಂಟಿನಿರ್ದೇಶಕರು | 74400–109600 |
| 03 | ಉಪನಿರ್ದೇಶಕರು | 67550–104600 |
| 04 | ಸಹಾಯಕ ನಿರ್ದೇಶಕರು | 52650–97100 |
| 05 | ಜಿಲ್ಲಾ ಅಂಗವಿಲರ ಕಲ್ಯಾಣಾಧಿಕಾರಿ/ಅಧೀಕ್ಷಕರು | 43100–83900 |
| 06 | ವಿಶೇಷ ಶಾಲೆಗಳ ಅಧೀಕ್ಷಕರು | 43100–83900 |
| 07 | ಮ್ಯಾನೇಜರ್ ಬ್ರೈಲ್ ಪ್ರೆಸ್ | 43100–83900 |
| 08 | ಅಧೀಕ್ಷಕರು ಮಾನಸ ಕೇಂದ್ರ | 43100–83900 |
| 09 | ಲೆಕ್ಕಾಧೀಕ್ಷಕರು | 40900–78200 |
| 10 | ಅಪತ್ರಾಂಕಿತ ಅಧೀಕ್ಷಕರು | 37900–70850 |
| 11 | ಪದವೀಧರ ಸಹಾಯಕರು | 33450–62600 |
| 12 | ಸ್ಪೀಚ್ ಥೆರಫಿಸ್ಟ್ | 33450–62600 |
| 13 | ಮೊಬಿಲಿಟಿ ಇನ್‌ಸ್ಟ್ರಕ್ಟರ್ –1 | 33450–62600 |
| 14 | ಸ್ಟೀರಿಯೋಟೈಪ್ ಅಪರೇಟರ್/ | 33450–62600 |

| | | |
|---|---|---|
| 15 | ಸಂಗೀತ ಶಿಕ್ಷಕರು ದರ್ಜೆ-1 | 30350-58250 |
| 16 | ಸ್ಟಾಫ್ ನರ್ಸ್ | 30350-58250 |
| 17 | ಪ್ರಥಮ ದರ್ಜೆ /ಯೋಜನಾ ಸಹಾಯಕರು | 27650-52650 |
| 18 | ಶೀಘ್ರಲಿಪಿಗಾರರು | 27650-52650 |
| 19 | ಓಕ್ಯುಪೇಶನಲ್ ಥೆರಫಿಸ್ಟ್/ ಫಿಸಿಯೋಥೆರಫಿಸ್ಟ್ | 27650-52650 |
| 20 | ಸಂಗೀತ ಶಿಕ್ಷಕರು ದರ್ಜೆ-2 | 23500-47650 |
| 21 | ಪದವಿಪೂರ್ವ ಸಹಾಯಕರು | 23500-47650 |
| 22 | ವೃತ್ತಿ ಶಿಕ್ಷಕರು/ಕಂಪ್ಯೂಟರ್ ಶಿಕ್ಷಕರು | 23500-47650 |
| 23 | ಚಲನವಲನ ಬೋಧಕರು-2 | 23500-47650 |
| 24 | ದೈಹಿಕ ಶಿಕ್ಷಕರು | 23500-47650 |
| 25 | ಎ.ಎನ್.ಎಂ. | 23500-47650 |
| 26 | ಸಂಗೀತ ಶಿಕ್ಷಕರು ದರ್ಜೆ-3 | 21400-42000 |
| 27 | ದ್ವಿತೀಯ ದರ್ಜೆ ಸಹಾಯಕರು / ವಾರ್ಡನ್ /ಸ್ಟೋರ್ ಕೀಪರ್ | 21400-42000 |
| 28 | ಬೆರಳಚ್ಚುಗಾರರು | 21400-42000 |
| 29 | ಕಂಪ್ಯೂಟರ್ ಅಸಿಸ್ಟೆಂಟ್ | 21400-42000 |
| 30 | ಪ್ರುಫ್ ರೀಡರ್ | 21400-42000 |
| 31 | ಚಾಲಕರು | 21400-42000 |
| 32 | ಅಟೆಂಡರ್/ರಕ್ಷಕರು | 18600-32600 |
| 33 | ಅಡುಗೆಯವರು | 18600-32600 |
| 34 | ಅಯಾ/ಸೈಕಲ್ಆರ್ಡರ್ಲಿ/ಸೇವಕರು /ಅಡುಗೆ ಸಹಾಯಕರು | 17000-28950 |
| 35 | ಸ್ವೀಪರ್ | 17000-28950 |
| 36 | ದೋಬಿ | 17000-28950 |

# ಮಕ್ಕಳ ರಕ್ಷಣಾ ನಿರ್ದೇಶನಾಲಯ

| ಕ್ರ.ಸಂ | ಹುದ್ದೆಯ ಪದನಾಮ | ಹುದ್ದೆವಾರು ನಿಗದಿ ಪಡಿಸಿರುವ ವೇತನ (ಒಬ್ಬರಿಗೆ) |
|---|---|---|
| 1 | ನಿರ್ದೇಶಕರು(ಐಸಿಪಿಎಸ್) ಸಮಗ್ರ ಮಕ್ಕಳ ರಕ್ಷಣಾ ಯೋಜನೆ (ಭಾರತೀಯ ಆಡಳಿತ ಸೇವೆಯ ಹಿರಿಯ/ಕಿರಿಯ ವೇತನ ಶ್ರೇಣಿ) | ಐ.ಎ.ಎಸ್ ಶ್ರೇಣಿ |
| 2 | ಆಪ್ತ ಸಹಾಯಕರು | 27650-52650 |
| 3 | ವಾಹನ ಚಾಲಕರು | 21400-42000 |
| 4 | ಗ್ರೂಪ್ 'ಡಿ' | 17000-28950 |

## ಮಕ್ಕಳ ರಕ್ಷಣಾ ನಿರ್ದೇಶನಾಲಯ ಹುದ್ದೆಗಳ ಮತ್ತು ವೇತನದ ವಿವರ

| ಕ್ರ.ಸಂ | ಹುದ್ದೆಯ ಪದನಾಮ | ಹುದ್ದೆವಾರು ನಿಗದಿ ಪಡಿಸಿರುವ ವೇತನ (ಒಬ್ಬರಿಗೆ) (ರೂ.ಗಳಲ್ಲಿ) |
|---|---|---|
| 1 | ಯೋಜನಾ ನಿರ್ದೇಶಕರು | 82000-117700 |
| 2 | ಕಾರ್ಯಕ್ರಮ ವ್ಯವಸ್ಥಾಪಕರು | 67550-104600-<br>35,000- |
| 3 | ಕಾರ್ಯಕ್ರಮ ಅಧಿಕಾರಿ | 61150-102100-<br>26,000- |
| 4 | ಲೆಕ್ಕಧಿಕಾರಿಗಳು | 52650-97100- |
| 5 | ಲೆಕ್ಕಿಗರು | 27650-52650-<br>14,000- |
| 6 | ಲೆಕ್ಕ ಸಹಾಯಕರು | 14000- |
| 7 | ಕಾರ್ಯಕ್ರಮ ಸಹಾಯಕರು/ ಡಾಟಾ ಎಂಟ್ರಿ ಆಪರೇಟರ್ | 10000- |
| 8 | ಕಾರ್ಯಕ್ರಮ ಸಹಾಯಕರು | 8000- |

## ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳಿಗೆ ಮಂಜೂರಾದ ಹುದ್ದೆಗಳು ಹಾಗೂ ನಿಗದಿ ಪಡಿಸಿರುವ ವೇತನಗಳ ವಿವರ.

| ಕ್ರ.ಸಂ | ಹುದ್ದೆಯ ಪದನಾಮ | ಹುದ್ದೆವಾರು ನಿಗದಿ ಪಡಿಸಿರುವ ವೇತನ (ಒಬ್ಬರಿಗೆ) |
|---|---|---|
| 1 | ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು | 61150-102100 |
| 2 | ರಕ್ಷಣಾಧಿಕಾರಿ (ಸಾಂಸ್ಥಿಕ) | 21,000 |
| 3 | ರಕ್ಷಣಾಧಿಕಾರಿ (ಅಸಾಂಸ್ಥಿಕ) | 21,000 |
| 4 | ಲೀಗಲ್ ಕಂ. ಪರಿವೀಕ್ಷಣಾಧಿಕಾರಿ | 37900-70850<br>14,000 |
| 5 | ಸಮಾಲೋಚಕರು | 14,000 |
| 6 | ಸಮಾಜಕಾರ್ಯಕರ್ತರು | 14,000 |
| 7 | ಲೆಕ್ಕಿಗರು | 27650-52650<br>14,000 |
| 8 | ಸಹಾಯಕರು ಕಂ. ಡಿಇಒ | 10,000 |
| 9 | ಡಾಟಾ ಅನಾಲಿಸ್ಟ್ | 14,000 |
| 10 | ಔಟ್ ರೀಚ್ ವರ್ಕರ್ | 8,000 |

## ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ

| ಕ್ರ.ಸಂ. | ಹುದ್ದೆ | ಸಿಬ್ಬಂದಿಗಳ ವೇತನದ ವಿವರಗಳು |
|---|---|---|
| | ಕೇಂದ್ರಕಛೇರಿ | |
| 1 | ವ್ಯವಸ್ಥಾಪಕ ನಿರ್ದೇಶಕರು | 90500 |
| 2 | ಪ್ರಧಾನ ವ್ಯವಸ್ಥಾಪಕರು | 74400 |
| 3 | ಕಂಪನಿ ಕಾರ್ಯದರ್ಶಿಗಳು | 11800 |
| 4 | ಸಹಾಯಕ ವ್ಯವಸ್ಥಾಪಕರು (ಲೆಕ್ಕ) | 52650 |
| 5 | ಆಡಳಿತಾಧಿಕಾರಿ | 52650 |
| 6 | ಸಹಾಯಕ ಪ್ರಧಾನ ವ್ಯವಸ್ಥಾಪಕರು | 52650 |
| 7 | ಸಹಾಯಕ ವ್ಯವಸ್ಥಾಪಕರು (ಮಾರುಕಟ್ಟೆ) | 43100 |
| 8 | ಕೈಗಾರಿಕಾಉತ್ತೇಜನಾಧಿಕಾರಿ | 43100 |
| 9 | ಲೆಕ್ಕ ಅಧೀಕ್ಷಕರು | 43100 |
| 10 | ಅಧೀಕ್ಷಕರು | 33450 |
| 11 | ದಾಖಲೆ ಪರಿಣಿತರು | 33450 |
| 12 | ಗ್ರಂಥಪಾಲಕರು | 27650 |
| 13 | ಶೀಘ್ರಲಿಪಿಗಾರರು | 27650 |
| 14 | ಅಧ್ಯಕ್ಷರ ಆಪ್ತ ಸಹಾಯಕರು | 27650 |
| 15 | ಪ್ರಥಮದರ್ಜೆ ಸಹಾಯಕರು | 27650 |
| 16 | ದ್ವಿತೀಯದರ್ಜೆ ಸಹಾಯಕರು | 21400 |
| 17 | ಬೆರಳಚ್ಚುಗಾರರು | 21400 |
| 18 | ಚಾಲಕರು | 21400 |
| 19 | 'ಡಿ' ಗ್ರೂಪ್ ನೌಕರರು | 17000 |
| | ಜಿಲ್ಲಾ ಮಟ್ಟದ ಕಛೇರಿ | |
| 20 | ಅಭಿವೃದ್ಧಿ ನಿರೀಕ್ಷಕರು | 33450 |

****

## ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ ಕಛೇರಿ

## ಕಾರ್ಯನಿರ್ವಹಿಸುತ್ತಿರುವ ವಿವಿಧ ಸ್ತರದ ಸಿಬ್ಬಂದಿಗಳ ವಿವರ ಮತ್ತು ಹುದ್ದೆಗಳ ವೇತನ ಶ್ರೇಣಿ

| ಕ್ರ.ಸಂ. | ಹುದ್ದೆಯ ಪದನಾಮ | ವೇತನ ಶ್ರೇಣಿ |
|---|---|---|
| 1 | ಶಾಖಾಧಿಕಾರಿಗಳು | 37900–70850 |
| 2 | ದ್ವಿತೀಯ ದರ್ಜೆ ಸಹಾಯಕರು | 21400–42000 |
| 3 | ದ್ವಿತೀಯ ದರ್ಜೆ ಸಹಾಯಕರು | 21400–42000 |
| 4 | ಬೆರಳಚ್ಚುಗಾರರು | 21400–42000 |
| 5 | ಚಾಲಕರು | 21400–42000 |
| 6 | ಗ್ರೂಪ್ ಡಿ | 17000–28950 |

## ಕರ್ನಾಟಕ ರಾಜ್ಯ ಮಹಿಳಾ ಆಯೋಗ

| | |
|---|---|
| ಕಾರ್ಯದರ್ಶಿ | 90500-2200-97100- 2500-112100-2800-123300 |
| ಶಾಖಾಧಿಕಾರಿ | 43100-1100- 46400-1250-53900-1450-62600-1650-72500-1900-83900 |
| ದ್ವಿ.ದ.ಸ | 24600-600-27000-650-29600-750-32600-850-36000-950-39800-1100-42000 |

## ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ

| | | |
|---|---|---|
| ಕಾರ್ಯದರ್ಶಿಗಳು | 01 | 74400–109600 |
| ಸಹಾಯಕ ನಿರ್ದೇಶಕರು | 01 | 52650–97100 |
| ಲೆಕ್ಕಾಧಿಕಾರಿಗಳು | 01 | 52650–97100 |
| ಅಧೀಕ್ಷಕರು | 01 | 37900–70850 |
| ಪ್ರಥಮ ದರ್ಜೆ ಸಹಾಯಕರು | 02 | 27650–52650 |
| ಶೀಘ್ರಲಿಪಿಗಾರರು | 01 | 27650–52650 |
| ದ್ವಿ. ದರ್ಜೆ ಸಹಾಯಕರು | 01 | 23500–47650 |
| ವಾಹನಚಾಲಕರು | 02 | 23500–47650 |
| ಗ್ರೂಪ್ ಡಿ | 02 | 18000–28950 |

ಕರ್ನಾಟಕ ಬಾಲವಿಕಾಸ ಅಕಾಡೆಮಿ, ಧಾರವಾಡ.
ಅಧ್ಯಕ್ಷರ ವಿಭಾಗ

| ಕ್ರಸಂ | ಹುದ್ದೆಗಳ ಪದನಾಮ | ನಿಗದಿಪಡಿಸಿರುವ ವೇತನ ಶ್ರೇಣಿ | ಬಾಹ್ಯಮೂಲದದಿಂದ ಪಡೆದ ಹುದ್ದೆಗಳು ಹಾಗೂ ಗೌರವಧನ |
|---|---|---|---|
| 2 | ಅಧ್ಯಕ್ಷರ ಆಪ್ತ ಸಹಾಯಕರು | 27650–52650 | 19868/– |
| 3 | ವಾಹನ ಚಾಲಕರು | 21400–42000 | 18125/– |
| 4 | ಜವಾನ | 17000–28950 | 16760/– |

**ವಿ.ಸೂ: ಅಧ್ಯಕ್ಷರ ಹುದ್ದೆಯು ನಾಮನಿರ್ದೇಶಿತವಾಗಿದ್ದು, ಪ್ರತಿ ಮಾಹೆಯಾನ ರೂ .55000/–ಗಳ ಗೌರವಧನವನ್ನು ಪಾವತಿಸಲಾಗುತ್ತಿದೆ.**

| ಕರ್ನಾಟಕ ಬಾಲವಿಕಾಸ ಅಕಾಡೆಮಿ, ಧಾರವಾಡ. ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಸ್ಥರದ ಸಿಬ್ಬಂದಿಯವರಿಗೆ ನಿಗದಿಪಡಿಸಿರುವ ವೇತನ ಶ್ರೇಣಿ | | | |
|---|---|---|---|
| **ಯೋಜನಾಧಿಕಾರಿಗಳ ವಿಭಾಗ** | | | |
| ಕ್ರಸಂ | ಹುದ್ದೆಗಳ ಪದನಾಮ | ನಿಗದಿಪಡಿಸಿರುವ ವೇತನ ಶ್ರೇಣಿ | ಬಾಹ್ಯಮೂಲದದಿಂದ ಪಡೆದ ಹುದ್ದೆಗಳು ಹಾಗೂ ಗೌರವಧನ |
| 1 | ಕಚೇರಿ ಅಧೀಕ್ಷಕರು | 43100–83900 (67550) | – |
| 2 | ಯೋಜನಾಧಿಕಾರಿಗಳ ಅಪ್ತಸಹಾಯಕರು | 33450–62600 (40900) | – |
| 3 | ಅಧ್ಯಕ್ಷರ ಅಪ್ತ ಸಹಾಯಕರು | 33450–62600 (40900) | – |
| 4 | ಶೀಘ್ರಲಿಪಿಗಾರರು | 27650–52650 | 19868/– |
| 5 | ಪ್ರ.ದ.ಸ. | 30350–58250 (35150) | – |
| 6 | ದ್ವಿ.ದ.ಸ. | 21400–42000 | 19868/– |
| 7 | ವಾಹನ ಚಾಲಕರು | 21400–42000 | 18125/– |
| 8 | ಜವಾನ | 17000–28950 | 16760/– |

# ಕರ್ನಾಟಕ ಸಮಾಜ ಕಲ್ಯಾಣ ಮಂಡಳಿ

## STATEMENT OF SALARY DETAILS BEING PAID TO STAFF OF KARNATAKA STATE SOCIAL WELFARE BOARD AS ON 30.11.2021

| Sl. No | Name of the staff | Designation | Basic Pay | Gross |
|---|---|---|---|---|
| 1 | 2 | 3 | 4 | 5 |
| 1 | S.Chandrakala | FDC/Incharge Accountant | 58250 | 87201 |
| 2 | S.Keshava Murthy | FDC/Incharge Suptd | 45300 | 70956 |
| 3 | Nagalakshmi C.S. | FDC | 39800 | 59803 |
| 4 | Vimala M.R. | SDC | 25200 | 38622 |
| 5 | Uma K.V. | SDC | 38850 | 58392 |
| 6 | Vijayalakshmi.S. Bennur | SDC | 32600 | 49111 |
| 7 | V.Venkatesh Reddy | Driver | 37900 | 57682 |
| 8 | Venkatesh Babu G | Driver | 35150 | 54098 |
| 9 | Somashekhar M. | Peon | 31100 | 47584 |
| 10 | Ronald Monterio | Night Watchman | 31100 | 47284 |
| | Total | | | 570733 |